ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 66

25–8–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 66

‘ನೀನು ಬೂಟು ನೆಕ್ಕಿದ ವಂಶಸ್ಥ’

ಶಾಸಕ ಯತ್ನಾಳ್ ವಿರುದ್ಧ ಅವಹೇಳನಕಾರಿ ವಿಡಿಯೋ ಹರಿಬಿಟ್ಟಿದ್ದ ಮುಸ್ಲಿಂ ಯುವಕ; ಭುಗಿಲೆದ್ದ ಆಕ್ರೋಶ!

ಕೊಪ್ಪಳ: ವಿಧಾನಸಭೆಯ ಅಧಿವೇಶನದಲ್ಲಿ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಆಜಾನ್ ಕುರಿತಾಗಿ ಪ್ರಸ್ತಾಪಿಸಿದ್ದಕ್ಕೆ ಆಕ್ರೋಶಗೊಂಡ ಯುವಕನೋರ್ವ ವಿಡಿಯೋ ಮಾಡಿ ಶಾಸಕರ ವಿರುದ್ಧ ಅವಹೇಳನಕಾರಿ ಮಾತುಗಳನ್ನಾಡಿದ್ದನು. ಈ ವಿಡಿಯೋ ವೈರಲ್ ಆಗುತ್ತಿದ್ದಂತೆ ಯತ್ನಾಳ್ ಬೆಂಬಲಿಗರು ಆಕ್ರೋಶ ವ್ಯಕ್ತಪಡಿಸಿದ್ದು ಆರೋಪಿಯನ್ನು ಬಂಧಿಸುವಂತೆ ಆಗ್ರಹಿಸಿದ್ದರು. ಈ ಹಿನ್ನೆಲೆಯಲ್ಲಿ ಕನಕಗಿರಿ ಪೊಲೀಸರು ಆರೋಪಿ ಕನಕಗಿರಿಯ ಮುಸಲಾಪುರ ಗ್ರಾಮದ ಮುಸ್ಲಿಂ ಯುವಕ ಹುಸೇನಿಯನ್ನು ಬಂಧಿಸಿದ್ದಾರೆ.

ವಿಡಿಯೋದಲ್ಲಿ ಏನಿದೆ? : ನೀನು ಬೂಟು ನೆಕ್ಕಿದ ವಂಶಸ್ಥ ಎಂದು ಯುವಕ ಹುಸೇನಿ ನಾಲಿಗೆ ಹರಿಬಿಟ್ಟಿದ್ದನು. ಈ ವಿಡಿಯೋಗೆ ತೀವ್ರ ಆಕ್ರೋಶ ವ್ಯಕ್ತವಾಗಿತ್ತು. ಯತ್ನಾಳ್ ಬೆಂಬಲಿಗರು ಮುಸಲಾಪುರ ಗ್ರಾಮದಲ್ಲಿ ಜಮಾವಣೆಗೊಂಡಿದ್ದ ಆರೋಪಿಯ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದ್ದರು. ನಂತರ ಹುಸೇನಿ ಕ್ಷಮೆ ಕೂಡ ಕೇಳಿದ್ದಾನೆ.

ಡಿಜೆ ನಿರ್ಬಂಧಕ್ಕೆ ಹೈಕೋರ್ಟ್ ಅಸ್ತ್ರ

ಬೆಂಗಳೂರು: ಗೌರಿ–ಗಣೇಶ ಹಬ್ಬ, ಈದ್ ಮಿಲಾದ್ ಮೆರವಣಿಗೆ ಮತ್ತು ಸಾರ್ವಜನಿಕ ಸಮಾರಂಭಗಳಲ್ಲಿ ಡಿಜೆ ನಿರ್ಬಂಧಿಸಿ, ಬೆಂಗಳೂರು ಪೊಲೀಸರು ಹೊರಡಿಸಿದ್ದ ಸುತ್ತೋಲೆ ಪ್ರಶ್ನಿಸಲಾದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.ಪೊಲೀಸರ ಸುತ್ತೋಲೆ ಪ್ರಶ್ನಿಸಿ, ಕರ್ನಾಟಕ ಲಘು ಸಂಗೀತ ಮತ್ತು ಸಾಂಸ್ಕೃತಿಕ ಕಲಾವಿದರ ಸಂಘಟನೆ ಪದಾಧಿಕಾರಿ ಶಂಕರ್ ಅರ್ಜಿ ಸಲ್ಲಿಸಿದ್ದರು.ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ಈ ಅರ್ಜಿ ವಿಚಾರಣೆ ನಡೆಸಿ, ಬೆಂಗಳೂರು ಪೊಲೀಸರು ಹೊರಡಿಸಿರುವ ಸುತ್ತೋಲೆಯಲ್ಲಿ ಯಾವುದೇ ಲೋಪಗಳಿಲ್ಲ. ವಸತಿ ಪ್ರದೇಶದಲ್ಲಿ ಶಬ್ದದ ಮಟ್ಟ ನಿರ್ಬಂಧಿಸಲಾಗಿದೆ ಎಂದು ತಿಳಿಸಿತು.

ಡಿಕೆಶಿ ಹಾದಿಯಲ್ಲಿ ಎಚ್‌ಡಿ ರಂಗನಾಥ್: ಆರ್‌ಎಸ್‌ಎಸ್ ಗೀತೆ ಹಾಡಿ ಹೊಗಳಿದ ಕುಣಿಗಲ್ ಶಾಸಕ

ತುಮಕೂರು: ‘ನಮಸ್ತೆ ಸದಾ ವತ್ಸಲೇ ಮಾತೃಭೂಮಿ’ ಎಂಬ ಆರ್‌ಎಸ್‌ಎಸ್ ಗೀತೆಯ ಮೊದಲ ಕೆಲವು ಸಾಲುಗಳನ್ನು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸದನದಲ್ಲಿ ಹಾಡಿದ ನಂತರ, ಆಡಳಿತಾರೂಢ ಕಾಂಗ್ರೆಸ್ ಶಾಸಕ ಎಚ್‌ಡಿ ರಂಗನಾಥ್ ಕೂಡ ಭಾನುವಾರ ಆರ್‌ಎಸ್‌ಎಸ್ ಗೀತೆಯ ಆರಂಭಿಕ ಸಾಲುಗಳನ್ನು ಹಾಡಿ ಹೊಗಳಿದ್ದಾರೆ.

11 ಜನರ ಪ್ರಾಣವನ್ನು ಬಲಿತೆಗೆದುಕೊಂಡ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತದ ಕುರಿತು ರಾಜ್ಯ ವಿಧಾನಸಭೆಯಲ್ಲಿ ನಡೆದ ಚರ್ಚೆಯ ಸಂದರ್ಭದಲ್ಲಿ ಆಗಸ್ಟ್ 21 ರಂದು ಡಿಕೆ ಶಿವಕುಮಾರ್ ಆರ್‌ಎಸ್‌ಎಸ್ ಗೀತೆಯನ್ನು ಹಾಡುವ ಮೂಲಕ ಎಲ್ಲರನ್ನೂ ಅಚ್ಚರಿಗೊಳಿಸಿದ್ದರು.

ತುಮಕೂರು ಜಿಲ್ಲೆಯ ಕುಣಿಗಲ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರಂಗನಾಥ್, ಆರ್‌ಎಸ್‌ಎಸ್ ಗೀತೆ ‘ನಮಸ್ತೆ ಸದಾ ವತ್ಸಲೇ’ದ ಆರಂಭಿಕ ಸಾಲುಗಳನ್ನು ಹಾಡಿದರು. ಈ ಗೀತೆ ‘ತುಂಬಾ ಒಳ್ಳೆಯ ಹಾಡು’. ವಿಧಾನಸಭೆಯಲ್ಲಿ ಉಪಮುಖ್ಯಮಂತ್ರಿ ಅದನ್ನು ಹಾಡಿದ ನಂತರ ನಾನು ಅದನ್ನು ಕೇಳಿದೆ’ ಎಂದು ಹೇಳಿದರು.

‘ನಾನು ಅದರ ಅರ್ಥವನ್ನು ಓದಿದ್ದೇನೆ. ನಾವು ಹುಟ್ಟಿದ ಭೂಮಿಗೆ ನಮಸ್ಕರಿಸಬೇಕು ಎಂದು ಅದು ಹೇಳುತ್ತದೆ. ಅದರಲ್ಲಿ ನನಗೆ ಯಾವುದೇ ತಪ್ಪಿಲ್ಲ. ನಮ್ಮದು ಜಾತ್ಯತೀತ ಪಕ್ಷ ಮತ್ತು ನಾವು ಇತರರಿಂದ ಒಳ್ಳೆಯದನ್ನು ಸ್ವೀಕರಿಸಬೇಕು’ ಎಂದು ಹೇಳಿದರು.

ಅಕ್ರಮ ಬೆಟ್ಟಿಂಗ್ ಪ್ರಕರಣ: ಆಗಸ್ಟ್28 ರವರೆಗೆ ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿ ಇ.ಡಿ ವಶಕ್ಕೆ

ಬೆಂಗಳೂರು: ಅಕ್ರಮವಾಗಿ ಬೆಟ್ಟಿಂಗ್ ಕಂಪನಿ ನಡೆಸುತ್ತಿದ್ದ ಆರೋಪಕ್ಕೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಬಂಧನಕ್ಕೀಡಾಗಿರುವ ಕಾಂಗ್ರೆಸ್ ಶಾಸಕ ಕೆಸಿ ವೀರೇಂದ್ರ ‘ಪಪ್ಪಿ’ ಅವರನ್ನು ಆಗಸ್ಟ್ 28 ರವರೆಗೆ ಜಾರಿ ನಿರ್ದೇಶನಾಲಯದ (ಇ.ಡಿ) ವಶಕ್ಕೆ ನೀಡಿ ಭಾನುವಾರ ಇಲ್ಲಿನ ನ್ಯಾಯಾಲಯ ಆದೇಶ ನೀಡಿದೆ. ಮೂಲಗಳ ಪ್ರಕಾರ, ಶಾಸಕರನ್ನು ಇಂದು ಬೆಳಿಗ್ಗೆ ಸಿಕ್ಕಿಂನಿಂದ ಬೆಂಗಳೂರಿಗೆ ಕರೆತರಲಾಗಿದೆ.

ಅವರು ಇಲ್ಲಿನ ವಿಮಾನ ನಿಲ್ದಾಣಕ್ಕೆ ಆಗಮಿಸಿದಾಗ ಇ.ಡಿ ವಿಶೇಷ ತಂಡ ಅವರನ್ನು ವಶಕ್ಕೆ ತೆಗೆದುಕೊಂಡಿತು. ಯಾವುದೇ ಅಹಿತಕರ ಘಟನೆ ನಡೆಯದಂತೆ ತಡೆಯಲು, ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 2 ರಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿತ್ತು.

ಇಸ್ಲಾಂನಲ್ಲಿ ಅಲ್ಲಾ ಬಿಟ್ಟರೆ ಬೇರೆ ದೇವರಿಲ್ಲ: ಚಾಮುಂಡಿಯನ್ನು ದೇವತೆ ಅಂತ ಬಾನು ಮುಷ್ತಾಕ್ ಒಪ್ಪುತ್ತಾರಾ?: ಪ್ರತಾಪ್ ಸಿಂಹ

ಮೈಸೂರು: ವಿಶ್ವವಿಖ್ಯಾತ ಮೈಸೂರು ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ಪುರಸ್ಕೃತೆ ಬಾನು ಮುಷ್ತಾಕ್ ಅವರು ಆಯ್ಕೆಯಾಗಿರುವುದಕ್ಕೆ ಇದೀಗ ವಿರೋಧ ವ್ಯಕ್ತವಾಗುತ್ತಿದೆ. ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಮಾಜಿ ಸಂಸದ ಪ್ರತಾಪ್ ಸಿಂಹ ಸೇರಿದಂತೆ ಬಿಜೆಪಿ ನಾಯಕರು ಭಾನು ಮುಷ್ತಾಕ್ ಆಯ್ಕೆಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನಾಡದೇವತೆ ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಸಲ್ಲಿಸಿ ದೀಪ ಬೆಳಗುವುದರ ಮೂಲಕ ದಸರಾವನ್ನು ಉದ್ಘಾಟಿಸಬೇಕು. ಭಾನು ಅವರು ಮುಸ್ಲಿಂ ಆಗಿರುವುದರಿಂದ ಅವರ ಸ್ವಂತ ಧಾರ್ಮಿಕ ನಂಬಿಕೆಗಳಿಗೆ ವಿರುದ್ಧವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಮತ್ತೊಂದೆಡೆ ಪ್ರತಾಪ್ ಸಿಂಹ ಮಾತನಾಡಿ, ಇಸ್ಲಾಂ ಅಲ್ಲಾ ಬಿಟ್ಟರೆ ಬೇರೆ ಯಾರೂ ದೇವರಿಲ್ಲಎನ್ನುತ್ತದೆ . ಹಾಗಾದರೆ ಬಾನು

ಮುಷ್ತಾಕ್ ಹೇಗೆ ತಾಯಿ ಚಾಮುಂಡಿಯನ್ನು ದೇವರು ಎಂದು ಒಪ್ಪಿಕೊಳ್ಳುತ್ತಾರೆ. ಅವರ ಧರ್ಮ ಅವರ ಮಾತನ್ನು ಒಪ್ಪುತ್ತಾ ಎಂದು ಪ್ರಶ್ನಿಸಿದರು. ಇನ್ನು ಬಾನು ಮುಷ್ತಾಕ್ ಬೂಕರ್ ಪ್ರಶಸ್ತಿ ಪಡೆದಿರುವುದಕ್ಕೆ ಅವರನ್ನು ಮುಂದಿನ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷೆ ಮಾಡಿ, ಆದರೆ ಧಾರ್ಮಿಕ ನಂಬಿಕೆ ಮತ್ತು ಆಚರಣೆಯ ಪ್ರತೀಕವಾಗಿರುವ ದಸರಾ ಉದ್ಘಾಟನೆಗೆ ಕರೆಯುವುದು ಸೂಕ್ತವಲ್ಲ ಎಂದು ಪ್ರತಾಪ್ ಸಿಂಹ ಹೇಳಿದ್ದಾರೆ.

ಈ ಬಗ್ಗೆ ಸಿಟಿ ರವಿ ಸಹ ಮಾತನಾಡಿದ್ದು ಚಾಮುಂಡಿ ತಾಯಿ ಮೇಲೆ ನಂಬಿಕೆ, ಭಕ್ತಿ ಇದ್ದರೆ ಅವರು ಉದ್ಘಾಟಿಸುತ್ತಾರೆ ಈ ಬಗ್ಗೆ ನಾನೇನು ಕಮೆಂಟ್ ಮಾಡುವುದಿಲ್ಲ ಎಂದು ಹೇಳಿದ್ದಾರೆ.

ಬಸನಗೌಡ ಪಾಟೀಲ್ ಯತ್ನಾಳ್ ಹೇಳಿಕೆ:

ನಾಡದೇವತೆ ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಸಲ್ಲಿಸಿ ದೀಪ ಬೆಳಗುವುದರ ಮೂಲಕ ದಸರಾವನ್ನು ಉದ್ಘಾಟಿಸಬೇಕು. ಈ ಬಗ್ಗೆ ಸ್ಪಷ್ಟತೆ ಇಲ್ಲದೆ ಲೇಖಕಿ ಹಾಗೂ ಹೋರಾಟಗಾರ್ತಿ ಬಾನು ಮುಷ್ತಾಕ್ ಅವರು ದಸರಾ ಉದ್ಘಾಟಿಸುವುದು ಸರಿಯಲ್ಲ ಎಂದು ಬಸನಗೌಡ ಪಾಟೀಲ್ ಯತ್ನಾಳ್ ಅವರು ಭಾನುವಾರ ಹೇಳಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ನಾನು ವೈಯಕ್ತಿಕವಾಗಿ ಶ್ರೀಮತಿ ಭಾನು ಮುಷ್ತಾಕ್ ಅವರನ್ನು ಲೇಖಕಿ ಹಾಗೂ ಹೋರಾಟಗಾರ್ತಿಯಾಗಿ ಗೌರವಿಸುತ್ತೇನೆ. ಆದರೆ, ನಾಡದೇವತೆ ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಸಲ್ಲಿಸಿ ದೀಪ ಬೆಳಗುವುದರ ಮೂಲಕ ದಸರಾವನ್ನು ಉದ್ಘಾಟಿಸುವುದು, ಅವರ ಸ್ವಂತ ಧಾರ್ಮಿಕ ನಂಬಿಕೆಗಳಿಗೆ ವಿರುದ್ಧವಾಗಿದೆ ಎಂದು ಹೇಳಿದ್ದಾರೆ.

ಇಸ್ಲಾಂ ಮೂರ್ತಿ ಪೂಜೆಯನ್ನು ಧಿಕ್ಕರಿಸಿ ಒಂದು ದೇವರು ಹಾಗೂ ಒಂದು ಗ್ರಂಥವನ್ನೇ ಒಪ್ಪಿಕೊಳ್ಳುತ್ತದೆ ಎಂಬ ನಂಬಿಕೆಯಲ್ಲಿ ಅವರು ಇನ್ನೂ ಇದ್ದಾರೆಯೇ, ಅಥವಾ ಎಲ್ಲಾ ಮಾರ್ಗಗಳೂ ಅಂತಿಮವಾಗಿ ಒಂದೇ ಮೋಕ್ಷಕ್ಕೆ ದಾರಿ ಮಾಡಿಕೊಡುತ್ತವೆ

ಹಸ್ತಿನಪುರ ಯೋಗ ಫೌಂಡೇಶನ್ ವತಿಯಿಂದ ಮಾದರಿ ಯೋಗ

ದೇಹ ಮನಸ್ಸು ಒಂದಾಗಲು ಯೋಗ ಸಹಕಾರಿ

ದಾವಣಗೆರೆ : ಮಾನವನ ದೇಹ ಮತ್ತು ಮನಸ್ಸು ಎರಡೂ ಒಂದಾಗಿ ಕೂಡುವುದಕ್ಕೆ ಯೋಗ ಎನ್ನುತ್ತೇವೆ. ದೇಹ ಇಲ್ಲಿಯೇ ಇದ್ದು ಮನಸ್ಸು ಎಲ್ಲಿಯೋ ಇದ್ದರೆ ನಿಮಗೆ ಹೇಳುವ ಪಾಠ ಅರ್ಥವಾಗಲ್ಲ. ದೇಹದ ಜೊತೆಗೆ ಮನಸ್ಸೂ ಪಾಠವನ್ನು ಕೇಳಿಸಿಕೊಂಡಾಗ ಮಾತ್ರ ನೀವು ಅತೀ ಹೆಚ್ಚಿನ ಅಂಕಗಳಿಸಲು ಸಾಧ್ಯ ಎಂದು ವಿರಕ್ತಮಠದ ಡಾ.ಬಸವಪ್ರಭು ಸ್ವಾಮೀಜಿ ಮಕ್ಕಳಿಗೆ ತಿಳಿಸಿದರು.

ನಗರದ ದೊಡ್ಡಪೇಟೆಯ ವಿರಕ್ತಮಠದ ಎಸ್.ಜೆ.ಎಂ. ಶಾಲೆಯಲ್ಲಿ ಹಸ್ತಿನಾಪುರ ಯೋಗ ಫೌಂಡೇಷನ್ ನಿಂದ ಪ್ರಾಥಮಿಕ, ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಆಯೋಜಿಸಿದ ಮಾದರಿ ಯೋಗ ಕಾರ್ಯಕ್ರಮ ಯೋಗವಾಹಿನಿ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಶ್ರೀಗಳು ಮಾತನಾಡಿದರು.

ಮಾನವನ ಮನಸ್ಸು ಸಹಾ ಚಂಚಲವಾಗಿರುತ್ತದೆ. ಈ ಚಂಚಲವಾಗಿರುವ ಮನಸ್ಸನ್ನು ನಿಯಂತ್ರಣದಲ್ಲಿಡಬೇಕಾದರೆ ಏಕಾಗ್ರತೆ ಬೇಕು, ಏಕಾಗ್ರತೆ ಬರಬೇಕಾದರೆ ನಿತ್ಯ ಯೋಗ ಮಾಡಬೇಕು. ಯೋಗ ಎನ್ನುವುದು ಜಾತ್ಯಾತೀತ, ಧರ್ಮಾತೀತವಾದ ಜೀವನ ಪದ್ಧತಿ. ಯೋಗವನ್ನು ಕಂಡು ಹಿಡಿದವರು ನಮ್ಮ ಭಾರತದ ಪತಂಜಲಿ ಮಹರ್ಷಿಗಳು. ಯಾರಿಗೆ ನೆಮ್ಮದಿ, ಶಾಂತಿ ಬೇಕೋ ಅವರು ನಿತ್ಯ ಯೋಗವನ್ನು ಮಾಡಬೇಕು ಎಂದರು.

ನೀವು ಪಾಠಗಳನ್ನು ಗಮನ ಕೊಟ್ಟು ಕೇಳಿದಾಗ ಮಾತ್ರ ಅಪಾರ ನೆನಪಿನ ಶಕ್ತಿ ಬರುತ್ತದೆ. ಕೇವಲ ಯೋಗ ಎನ್ನುವುದು ಶಾರೀರಕವಾದ ಪ್ರದರ್ಶನವಲ್ಲ, ಶಾರೀರಿಕದ ಜೊತೆಗೆ ಅದು ಮನಸ್ಸನ್ನು ನಿಯಂತ್ರಣ ಮಾಡುತ್ತದೆ. ಜೀವನದಲ್ಲಿ ಯಶಸ್ಸನ್ನು ಗಳಿಸಲು ಯೋಗ ಸಹಕಾರಿಯಾಗಿದೆ. ನಮ್ಮ ಮನಸ್ಸು ಕಂಡದ್ದಲ್ಲಾ ಬೇಕು ಎನ್ನುತ್ತದೆ. ಹಾಗಾಗದೇ ನಾವು ಹೇಳಿದಂತೆ ಮನಸ್ಸು ಕೇಳುವಂತಾಗಬೇಕು. ಆ ರೀತಿಯಾದ ಸಿದ್ಧಿಯನ್ನು ನಾವು ಪಡೆದುಕೊಳ್ಳಬೇಕು. ಮಾನವನ ಜೀವನದಲ್ಲಿ ಗುರಿ ಮುಖ್ಯ. ಗುರಿ ಕಡೆಗೆ ನಿಮ್ಮ ಮನಸ್ಸು ಇರಬೇಕು. ಆಗ ಮಾತ್ರ ನಿಮ್ಮ ಗುರಿಯನ್ನು ಮುಟ್ಟಲು ಸಾಧ್ಯ. ಇದ–ರಿಂದ ಜೀವನದಲ್ಲಿ ಯಶಸ್ವಿ ವ್ಯಕ್ತಿಯಾಗಿ ಗುರುತಿಸಿಕೊಳ್ಳುತ್ತೀರಿ. ಆದ್ದರಿಂದ ನಿತ್ಯ ನಿಮ್ಮ ಮನೆಗಳಲ್ಲಿ ಯೋಗಾಭ್ಯಾಸ ಮಾಡಿರಿ. ಇದರಿಂದ ನೆಮ್ಮದಿ ಸಿಗಲು ಸಾಧ್ಯ. ಮಾರುಕಟ್ಟೆಗಳಲ್ಲಿ ಹಣ ನೀಡಿದರೆ (3ನೇ ಪುಟಕ್ಕೆ)

ರಕ್ತದಾನವು ಮಾನವೀಯತೆ ಹಾಗೂ ಸತ್ಕಾರ್ಯದ ಕೆಲಸ

ಚಿಕ್ಕಮಗಳೂರು, ಆ24: ರಕ್ತದಾನವು ಮಾನವೀಯತೆ ಹಾಗೂ ಸತ್ಕಾರ್ಯದ ಕೆಲಸ. ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿ ಶರೀರವನ್ನು ಹಲವಾರು ಕಾಯಿಲೆಗಳಿಂದ ದೂರಿಡುವಲ್ಲಿ ಸಹಕಾರಿಯಾಗ ಲಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ನಗರದ ರೋಟರಿ ಸಭಾಂಗಣದಲ್ಲಿ ಭಾನುವಾರ ವಿಶ್ವ ಬಂಧುತ್ವ ದಿನದ ಪ್ರಯುಕ್ತ ಪ್ರಜಾಪಿತ ಬ್ರಹ್ಮ ಕುಮಾರೀಸ್ ಈಶ್ವರೀಯ ವಿಶ್ವ ವಿದ್ಯಾಲಯ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಹಯೋಗದಲ್ಲಿ ಏರ್ಪ ಡಿಸಿದ್ದ ರಾ–ಜಯೋಗಿನಿ ಬ್ರಹ್ಮಾಕು ಮಾರಿ ದಾದಿ ಡಾ॥ ಪ್ರಕಾಶ್‌ಮಣಿಜೀಯವರ 18ನೇ ಪುಣ್ಯ ಸ್ಮೃತಿದಿನದ ಪ್ರಯುಕ್ತ ಬೃಹತ್ ರಕ್ತದಾನ ಅಭಿ ಯಾನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ವಿದ್ಯಾದಾನ, ಅಂಗಾಂಗದಾನ, ಅನ್ನದಾನದ ನಡುವೆ ರಕ್ತದಾನವು ಬಹುಪುಣ್ಯದ ಕೆಲ ಸವಾಗಿದೆ. ರಕ್ತದ ಅವಶ್ಯಕತೆಯಿರುವ ತುರ್ತು ಸ್ಥಿತಿಯ ರೋಗಿಗಳನ್ನು ಉಳಿಸಲು ರಕ್ತದಾನ ಬಹುಮುಖ್ಯ ವಾಗಿದೆ. ಹೀಗಾಗಿ ಯುವಸಮೂಹ ಸ್ವಯಂಪ್ರೇರಿತರಾಗಿ ಪಾಲ್ಗೊಂಡು ಮತ್ತೊಂದು ಜೀವ ಉಳಿಸಲು ಮು ಂದಾಗಬೇಕಿದೆ ಎಂದರು.

ರಕ್ತಕಣದಲ್ಲಿ ಋಣಾತ್ಮಕ ಮತ್ತು ಧನಾತ್ಮಕಗಳೆಂಬ ಅಂಶಗಳಿವೆ. ವಿಶೇಷವಾಗಿ ‘ಓ’ ರಕ್ತಕಣವು ತುಂಬಾ ವಿರಳವಾಗಿದೆ. ಅಪಘಾತವಾದಲ್ಲಿ ಸಿಗುವುದು ಬಹಳಷ್ಟು ಕಷ್ಟಸಾಧ್ಯ. ಬಿಳಿರಕ್ತಣವು ದೇಹದಲ್ಲಿ ಕ್ಷೀಣಿಸಿದರೆ ಜೀವಕ್ಕೆ ಕುತ್ತು ಬಂದಂತೆ. ಹೀಗಾಗಿ ಪ್ರತಿಯೊಬ್ಬರು ಕನಿಷ್ಟ ವರ್ಷಕ್ಕೆ ಎರಡೂರು ಭಾರೀ ರಕ್ತದಾನ ಮಾಡಿ ದರೆ ದೇಹವು ಆರೋಗ್ಯದಿಂದ ಕೂಡಿರಲಿದೆ ಎಂದು ಹೇಳಿದರು.

ಪ್ರಜಾಪಿತ ಬ್ರಹ್ಮಕುಮಾರಿ ಜಿಲ್ಲಾ ಸಂಚಾಲಕಿ ಭಾಗ್ಯಕ್ಕ ಪ್ರಾಸ್ತಾವಿಕವಾಗಿ ಮಾತನಾಡಿ 1936ರಲ್ಲಿ ದಾದಿ ಯವರು ಸಂಸ್ಥೆಗೆ ಪಾದಾರ್ಪಣೆ ಮಾಡಿ ಸಾಮಾಜಿಕ ಚಟುವಟಿಕೆ ಮುಖೇನಾ ದೇಶ–ವಿದೇಶಗಳಲ್ಲಿ ಹೆಸರು ಸಂಪಾದಿಸಿದ್ದಾರೆ. ಉಳ್ಳವರ ಕುಟುಂಬಕ್ಕೆ ಸೇರಿದ ದಾದಿಯವರು ಜನಸ್ನೇಹಿ ಕಾರ್ಯ ಆಯ್ಕೆಮಾಡಿಕೊಂ ಡು ಮುನ್ನಡೆದವರು ಎಂದರು.

ಪ್ರಾರಂಭದಲ್ಲಿ ಬ್ರಹ್ಮಕುಮಾರೀಸ್ ಸಂಸ್ಥೆಗೆ ಓಂ ಮಂಡಳಿ ಎಂಬ ಹೆಸರಿತ್ತು. ತದನಂತರ ಬ್ರಹ್ಮಕುಮಾ ರೀಸ್ ಸಂಸ್ಥೆಯಾಗಿ ನಾಮಕರಣಗೊಂಡಿತು. ವಿಶ್ವಸಂಸ್ಥೆಯಲ್ಲಿ ಸದಸ್ಯತ್ವ ಹೊಂದಿದ ದಾದಿಯವರು ವಿಶ್ವಸೇ ವಾ ಕಾರ್ಯ ವಿಚಾರವಾಗಿ ಸಂಸ್ಥೆಯು ದಾದಿಯವರಲ್ಲಿ ಸಲಹೆ, ಸೂಚನೆಗಳನ್ನು ಪಡೆಯುವಷ್ಟು ಮನ್ನಣೆ ಪಡೆದುಕೊಂಡಿದ್ದರು ಎಂದು ಹೇಳಿದರು.

ಭಾರತ ಮತ್ತು ನೇಪಾಳ ರಾಷ್ಟ್ರಗಳಲ್ಲಿ ಕಳೆದ ಎರಡು ದಿನಗಳಿಂದ ಬ್ರಹ್ಮಕುಮಾರೀಸ್ ಸಂಸ್ಥೆ ಬೃಹತ್ ರಕ್ತದಾನ ಶಿಬಿರವನ್ನು ಎಲ್ಲೆಡೆ ಆಯೋಜಿಸಿದೆ. ಒಟ್ಟಾರೆ ಒಂದು ಲಕ್ಷ ರಕ್ತ ಸಂಗ್ರಹಿಸುವ ಗುರಿಯಿದ್ದು ಇದೀಗ 50 ಸಾವಿರಕ್ಕೆ ತಲುಪಿದ್ದೇವೆ. ಇದಕ್ಕೆ ಮೂಲ ಪ್ರೇರಣೆ ಡಾ॥ ಪ್ರಕಾಶ್‌ಮಣಿಜೀಯವರ ಅಮೂಲ್ಯ ಸೇವೆ. ಹೀಗಾಗಿ ಅವರ ಆದರ್ಶ ಅಳವಡಿಸಿಕೊಳ್ಳಬೇಕಿದೆ ಎಂದರು.

ಜಿಲ್ಲಾ ಸರ್ಜನ್ ಡಾ॥ ಚಂದ್ರಶೇಖರ್ ಮಾತನಾಡಿ ಅಪಘಾತ ಅಥವಾ ಡೆಂಗ್ಯೂ ಪ್ರಕರಣಗಳಲ್ಲಿ ರಕ್ತದ ಅವಶ್ಯಕತೆ ಬಹಳಷ್ಟಿದೆ. ಆ ನಿಟ್ಟಿನಲ್ಲಿ ಬ್ರಹ್ಮಕುಮಾರೀಸ್‌ಸಂಸ್ಥೆ ರಕ್ತದಾನ ಶಿಬಿರದ ಮೂಲಕ ಸಾಮಾಜಿಕ ಚ ಟುವಟಿಕೆ ಮುಂದಾಗಿ ಜೀವ ಉಳಿಸುವಂಥ ಸತ್ಕಾರ್ಯ ಮಾಡಿರುವುದು ಉತ್ತಮ ಕೆಲಸವಾಗಿದೆ ಎಂದರು.

ಮೊಬೈಲ್ ಆಚೆಗೂ ಅದ್ಭುತವಾದ ಜಗತ್ತಿದೆ

ಮೊಬೈಲ್ ಬಿಡಿ ಪುಸ್ತಕ ಹಿಡಿ ಅಭಿಯಾನದಲ್ಲಿ ಚಿಕ್ಕವೀರಯ್ಯ ಅಭಿಮತ

ದಾವಣಗೆರೆ: ಮೊಬೈಲ್ ಆಚೆಗೂ ಅದ್ಭುತವಾದ ಜಗತ್ತು ಇದೆ, ಮ

ಇಂದಿನ ರಾಶಿ ಭವಿಷ್ಯ

ಮೇಷ ರಾಶಿ

ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭ ಗಳಿಸಲು ನಿಮಗೆ ಸಲಹೆ ನೀಡಬಹುದು, ನೀವು ಈ ಸಲಹೆಯನ್ನು ಅನುಸರಿಸಿದರೆ, ನೀವು ಖಂಡಿತವಾಗಿಯೂ ಹಣವನ್ನು ಗಳಿಸುವಿರಿ. ಸ್ನೇಹಿತರು ಮತ್ತು ಸಂಬಂಧಿಗಳು ಹೆಚ್ಚು ಸಮಯ ಕೇಳಿದರೂ ಈ ಜಗತ್ತಿನ ಬಾಗಿಲುಗಳನ್ನು ಮುಚ್ಚಿ ನಿಮಗೆ ನೀವೇ ಒಳ್ಳೆಯ ವೈಭೋಗ ನೀಡಿಕೊಳ್ಳುವುದೊಳ್ಳೆಯದು.

ವೃಷಭ ರಾಶಿ

ತುಂಬಾ ಚಿಂತೆ ಮತ್ತು ಒತ್ತಡ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು. ನೀವು ಮಾನಸಿಕ ಸ್ಪಷ್ಟತೆಯನ್ನು ಕಾಯ್ದುಕೊಳ್ಳಲು ಗೊಂದಲ ಮತ್ತು ಹತಾಶೆಯನ್ನು ತಡೆಗಟ್ಟಬೇಕು. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು.

ಮಿಥುನ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ. ಕುಟುಂಬ ಅಥವಾ ಹತ್ತಿರದ ಸ್ನೇಹಿತರ ಜೊತೆ ಇದನ್ನು ಒಂದು ಅತ್ಯುತ್ತಮ ದಿನವಾಗಿಸಿ. ನಿಮ್ಮ ಪ್ರೀತಿಪಾತ್ರರು ಸ್ವಲ್ಪ ಕಿರಿಕಿರಿಗೊಂಡಂತೆ ತೋರುತ್ತದೆ ಇದು ನಿಮ್ಮ ಮನಸ್ಸಿನ ಮೇಲೆ ಒತ್ತಡವನ್ನು ಹಚ್ಚಿಸುತ್ತದೆ.

ಕರ್ಕ ರಾಶಿ

ಯಾವುದಾದರೂ ಸೃಜನಾತ್ಮಕ ಕೆಲಸದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಸೋಮಾರಿಯಾಗಿ ಕುಳಿತುಕೊಳ್ಳುವ ನಿಮ್ಮ ಅಭ್ಯಾಸ ಮಾನಸಿಕ ಶಾಂತಿಗೆ ಮಾರಣಾಂತಿಕವಾಗಬಹುದು. ದೊಡ್ಡ ಯೋಜನೆಗಳನ್ನು ಮತ್ತು ಕಲ್ಪನೆಗಳಿರುವ ಯಾರಾದರೂ ನಿಮ್ಮ ಗಮನ ಸೆಳೆಯುತ್ತಾರೆ – ಯಾವುದೇ ಹೂಡಿಕೆಗಳನ್ನು ಮಾಡುವ ಮೊದಲು ವ್ಯಕ್ತಿಯ ವಿಶ್ವಾಸಾರ್ಹತೆ ಮತ್ತು ಪ್ರಾಮಾಣಿಕತೆಯನ್ನು ದೃಢೀಕರಿಸಿ.

ಸಿಂಹ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ಪತ್ನಿಯೊಂದಿಗೆ ಶಾಪಿಂಗ್ ಅನ್ನು ಅಪಾರವಾಗಿ ಆನಂದಿಸುತ್ತೀರಿ. ಇದು ನಿಮ್ಮ ನಡುವಿನ ತಿಳುವಳಿಕೆಯನ್ನೂ ಹೆಚ್ಚಿಸುತ್ತದೆ. ಇಂದು, ನೀವು ನಿಮ್ಮ ಪ್ರಿಯತಮೆ ನಿಮ್ಮನ್ನು ಎಷ್ಟು ಪ್ರೀತಿಸುತ್ತಾರೆಂದು ತಿಳಿದುಕೊಳ್ಳುತ್ತೀರಿ. ನೀವು ಇಂದು ನಿಮ್ಮ ಕೆಲಸದಲ್ಲಿ ಒಂದು ಪ್ರಗತಿಯನ್ನು ನೋಡಬಹುದು

ಕನ್ಯಾ ರಾಶಿ

ನಿಮ್ಮ ಸುತ್ತಲಿನ ಸುಮಾರು ತುಂಬ ಬೇಡಿಕೆಯಿಡುತ್ತಾರೆಂದು ನಿಮಗನಿಸುತ್ತದೆ–ನಿಮಗೆ ಸಾಧ್ಯವಿರುವುದಕ್ಕಿಂತ ಹೆಚ್ಚು ಮಾಡಲು ಒಪ್ಪಿಕೊಳ್ಳಬೇಡಿ– ಮತ್ತು ಇತರರನ್ನು ಸಂತೋಷಪಡಿಸಲು ನಿಮ್ಮ ಮೇಲೆ ಒತ್ತಡ ಹಾಕಬೇಡಿ. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ ನೀವು ಮಕ್ಕಳು ಅಥವಾ ನಿಮಗಿಂತ ಕಡಿಮೆ ಅನುಭವಿಯಾಗಿರುವವರ ಜೊತೆ ತಾಳ್ಮೆಯಿಂದಿರಬೇಕು. ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ.ಕೇವಲ ಈ ಆನಂದವನ್ನು ಆಸ್ವಾದಿಸಿ. ಹಗಲುಗನಸು ನಿಮ್ಮ ಪತನಕ್ಕೆ ಕಾರಣವಾಗುತ್ತದೆ – ಇತರರು ನಿಮ್ಮ ಕೆಲಸ ಮಾಡುತ್ತಾರೆಂದು ನಿರೀಕ್ಷಿಸಬೇಡಿ.

ತುಲಾ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನೀವು ಕಮಿಷನ್‌ಗಳಿಂದ ಡಿವಿಡೆಂಡ್‌ಗಳಿಂದ– ಅಥವಾ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ. ಸಂಜೆಗೆ ಏನಾದರೂ ವಿಶೇಷವಾದದ್ದನ್ನು ಯೋಜಿಸಿ ಮತ್ತು ಅದನ್ನು ಸಾಧ್ಯವಾದಷ್ಟು ಪ್ರೇಮಮಯವಾಗಿಸಲು ಪ್ರಯತ್ನಿಸಿ

ವೃಶ್ಚಿಕ ರಾಶಿ

ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ ಹಾಗೂ ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ. ಭವಿಷ್ಯದಲ್ಲಿ ನೀವು ಆರ್ಥಿಕವಾಗಿ ಬಲವಾಗಿರಬೇಕೆಂದು ಬಯಸಿದರೆ ಇಂದಿನಿಂದಲೇ ಹಣವನ್ನು ಉಳಿಸಿ. ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ.

ಧನು ರಾಶಿ

ಹೆಚ್ಚಿನ ಕ್ಯಾಲೋರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ನಿಮ್ಮ ದೈನಂದಿನ ಒತ್ತಡದ ಜೀವನದಿಂದ ನಿಮಗೆ ಸುಖ ಮತ್ತು ವಿಶ್ರಾಂತಿಯನ್ನು ತರುತ್ತದೆ ನಾಳೆ ಬಹಳ ತಡವಾಗುವುದರಿಂದ ನೀವು ನಿಮ್ಮ ಪ್ರಿಯತಮೆಗೆ ನಿಮ್ಮ ಸಂದೇಶವನ್ನು ಕೂಡಲೇ ತಿಳಿಸಬೇಕು. ಕೆಲಸದ ಬದಲಾವಣೆ ನಿಮಗೆ ಮಾನಸಿಕ ತೃಪ್ತಿ ನೀಡುತ್ತದೆ

ಮಕರ ರಾಶಿ

ಒತ್ತಡ ಸಣ್ಣ ಅನಾರೋಗ್ಯಕ್ಕೆ ಕಾರಣವಾಗಬಹುದು. ಆರಾಮವಾಗಿರಲು ಸ್ನೇಹಿತರು ಮತ್ತು ಕುಟುಂಬದ ಸದಸ್ಯರ ಜೊತೆಗಿರಿ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ಜನರು ನಿಮಗೆ ಹೊಸ ಭರವಸೆ ಹಾಗೂ ಕನಸುಗಳನ್ನು ನೀಡುತ್ತಾರೆ ಇದು ನಿಮ್ಮ ಸ್ವಸಾಮರ್ಥ್ಯವನ್ನು ಅವಲಂಬಿಸಿರುತ್ತದೆ.

ಕುಂಭ ರಾಶಿ

ಮಾನಸಿಕ ಶಾಂತಿಗಾಗಿ ನಿಮ್ಮ ಒತ್ತಡವನ್ನು ಪರಿಹರಿಸಿ. ಹೂಡಿಕೆ ಶಿಫಾರಸು ಮಾಡಲಾಗಿದ್ದರೂ ಸರಿಯಾದ ಸಲಹೆ ಪಡೆಯಬೇಕು. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ. ವೈಯಕ್ತಿಕ ಸಂಬಂಧಗಳು ಸೂಕ್ಷ್ಮ ಹಾಗೂ ಸಂವೇದನಾಶೀಲವಾಗಿವೆ..

ಮೀನ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ.

ಮಧ್ಯಸ್ಥಿಕೆ ಮತ್ತು ರಾಜಿಯಿಂದ ಮಾತ್ರ ನೆಮ್ಮದಿಯ ಬದುಕು ಸಾಧ್ಯ ; ನ್ಯಾಯಾಧೀಶೆ ವೇಲಾ ಡಿಕೆ

ದಾವಣಗೆರೆ:ಮಧ್ಯಸ್ಥಗಾರಿಕೆ ಮತ್ತು ರಾಜಿ ಸಂಧಾನದಿಂದ ಮಾತ್ರ ನೆಮ್ಮದಿಯ ಬದುಕು ಸಾಧ್ಯವೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ವೇಲಾ ಡಿ.ಕೆ ಹೇಳಿದರು.

ಕರ್ನಾಟಕ ರಾಜ್ಯ ಮಧ್ಯಸ್ಥಿಕೆ ಕೇಂದ್ರ ಮತ್ತು ದಾವಣಗೆರೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿರುವ ಎರಡು ದಿನಗಳ ದಾವಣಗೆರೆ, ಹಾವೇರಿ ಮತ್ತು ಚಿತ್ರದುರ್ಗ ಜಿಲ್ಲೆಯ ಮಧ್ಯಸ್ಥಗಾರ–ವಕೀಲರಿಗೆ ಆಯೋಜಿಸಿರುವ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಿವಿಲ್ ಪ್ರಕ್ರಿಯ ಸಮಿತಿ ಕರ್ನಾಟಕ ತಿದ್ದುಪಡಿ ಪ್ರಕಾರ ಕಲಂ 89ಎ ಅನ್ನು ಸೇರ್ಪಡೆ ಮಾಡಿದೆ. ಆ ಪ್ರಕಾರ ನ್ಯಾಯಾಲಯದಲ್ಲಿ ದಾಖಲಾಗುವ ಎಲ್ಲಾ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಕ್ಕೆ ರಾಜಿಗೆ ಕಳುಹಿಸುವ ವ್ಯವಸ್ಥೆ ಕಲ್ಪಿಸಿಕೊಡಲಾಗಿದೆ. ಅಷ್ಟೇ ಅಲ್ಲದೆ ಜಿಲ್ಲಾ, ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಮಧ್ಯಸ್ಥಿಕ ಕೇಂದ್ರಗಳನ್ನು ಆಯೋಜಿಸಲಾಗಿದ್ದು, ನುರಿತ ವಕೀಲರ ನೇಮಕ ಮಾಡಿಕೊಂಡು ಅವರ ಮುಖೇನ ಜಾರಿಯಲ್ಲಿರುವ ಪ್ರಕರಣಗಳ ಮಧ್ಯಸ್ಥಿಕೆ ನಡೆಸಿ ರಾಜೀ ಮೂಲಕ ಇತ್ಯರ್ಥಪಡಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ತಿಳಿಸಿದರು.

ಮಧ್ಯಸ್ಥಿಕೆಗಾರಿಕೆ ಪ್ರಕ್ರಿಯೆಯಲ್ಲಿ ಪಕ್ಷಗಾರರಿಗೆ ಯಾವುದೇ ಒತ್ತಡ ಅಥವಾ ಬಾಹ್ಯ ಪ್ರೇರಣೆ ಇಲ್ಲದೆ ರಾಜಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿ ಕೊಡಲಾಗುವುದು. ಮಧ್ಯಸ್ಥಗಾರರು ಒಬ್ಬ ಮೂರನೇ

ವ್ಯಕ್ತಿಯಾಗಿದ್ದು ಅವರು ಪಕ್ಷಗಾರರನ್ನು ಪ್ರತ್ಯೇಕವಾಗಿ ಮತ್ತು ಜಂಟಿಯಾಗಿ ವಿಚಾರಿಸಿ ಯೋಗ್ಯ ಮಾರ್ಗದರ್ಶನ ನೀಡುವರು ಎಂದ ಅವರು, ನ್ಯಾಯಾಲಯದ ನಿರ್ದೇಶನದಂತೆ ನಡೆಯುವ ಮಧ್ಯಸ್ಥಿಕ ಪ್ರಕ್ರಿಯೆ ಪಾರದರ್ಶಕ ನ್ಯಾಯಯುತ ಮತ್ತು ಪಕ್ಷಗಾರರ ಸ್ವಂತ ಮನಸ್ಸಿನಿಂದ ನಡೆಯುವ ಕಾರಣ ಎರಡು ಪಕ್ಷಗಾರರಿಗೆ (ತಿಟಿ–ತಿಟಿ ,ಂಣಣಚಿಣುಂಟಿ) ಗೆಲ್ಲುವ ಅವಕಾಶ ಇದೆ ಎಂದು ತಿಳಿಸಿದರು.

ಸುಪ್ರಿಂಕೋರ್ಟ್ ನಿರ್ದೇಶನದಂತೆ ಈಗಾಗಲೇ ಜುಲೈ 2025 ರಿಂದ ಅಕ್ಟೋಬರ್ 2025 ರವರೆಗೆ 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ಮಾತನಾಡಿ, ಪ್ರಸ್ತುತ ದಿನಮಾಗಳಲ್ಲಿ ಮೊದಲಿನ ರೀತಿ ಗ್ರಾಮ ಮಟ್ಟದಲ್ಲಿ ರಾಜಿ ಪಂಚಾಯಿತಿಗಳು ನಡೆಯುತ್ತಿಲ್ಲ. ಯಾರಿಗೂ ಕೂಡ ಇಂಥ ಸಂಧಾನ ಬೈಠಕ್ ಗಳನ್ನು ಮಾಡಲು ಸಮಯವಿಲ್ಲವೆಂದು ವಿಷಾದ ವ್ಯಕ್ತಪಡಿಸಿದರು. ಆದರೂ ಕೂಡ ಗಾಂಧಿ ಭಾರತದ ಪರಿಕಲ್ಪನೆಯಂತೆ ನ್ಯಾಯಾಲಯಕ್ಕೆ ಬರುವ ಪಕ್ಷಗಾರರ ಮಧ್ಯ ಬಾಂಧವ್ಯವನ್ನು ಬೆಳೆಸಿ ರಾಜೀ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಲು ಮಧ್ಯಸ್ಥಗಾರಿಕೆ ಪ್ರಕ್ರಿಯೆ ಒಂದು ಉತ್ತಮ ಸಾಧನವಾಗಿದೆ ಎಂದು ತಿಳಿಸಿದರು.

ವಿಶೇಷ ತರಬೇತಿದಾರರಾದ ಸುಧಾ ಎಸ್.ಎನ್. ಮತ್ತು ಶ್ರೀ ಲಕ್ಷ್ಮೀಶರಾವ್ ರವರು ಮೂರೂ ಜಿಲ್ಲೆಗಳ ಮಧ್ಯಸ್ಥಗಾರ ಹಾಗೂ ಸಂಧಾನಕಾರರಿಗೆ ತರಬೇತಿ ಕಾರ್ಯಗಾರ ನಡೆಸಿಕೊಟ್ಟರು.

ಕೃಷಿ ಪ್ರಶಸ್ತಿಗೆ ಅರ್ಜಿ ಆಹ್ವಾನ

ದಾವಣಗೆರೆ; 2025–26ನೇ ಸಾಲಿನ ಕೃಷಿ ಪ್ರಶಸ್ತಿಗೆ ಆನ್ ಲೈನ್ ಮೂಲಕ ಬೆಳೆ ಸ್ಪರ್ಧೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲಾ ಮಟ್ಟಕ್ಕೆ ಮುಸುಕಿನಜೋಳ (ಮಳೆಯಾಶ್ರಿತ) ಬೆಳೆಯನ್ನು ನಿಗದಿಪಡಿಸಲಾಗಿದ್ದು,

ತಾಲ್ಲೂಕು ಮಟ್ಟಕ್ಕೆ ದಾವಣಗೆರೆ, ಚನ್ನಗಿರಿ, ಹರಿಹರ ಹಾಗೂ ಹೊನ್ನಾಳಿ ತಾಲ್ಲೂಕುಗಳಿಗೆ ಭತ್ತ (ನೀರಾವರಿ) ಮತ್ತು ನ್ಯಾಮತಿ ಹಾಗೂ ಜಗಳೂರು ತಾಲ್ಲೂಕುಗಳಿಗೆ ಶೇಂಗಾ (ಮಳೆಯಾಶ್ರಿತ) ಬೆಳೆಗಳನ್ನು ನಿಗದಿಪಡಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯದಿನವಾಗಿರುತ್ತದೆ.

ಪ್ರಸಕ್ತ ಸಾಲಿನ ಕೃಷಿ ಪ್ರಶಸ್ತಿಗೆ ಕೆ.ಕಿಸಾನ್ ಪೋರ್ಟಲ್ ನಲ್ಲಿ ಆಎಕೆ ಲಾಗಿನ್ ಅಥವಾ ಸಿಟಿಜನ್ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, ನಾಗರೀಕ ಸೇವಾ ಕೇಂದ್ರ, ಸ್ವತ:

ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಅಗತ್ಯ ದಾಖಲಾತಿಗಳೊಂದಿಗೆ ರೈತ ಎಐಡಿ ಯನ್ನು ಬಳಸಿಕೊಂಡ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ/ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳನ್ನು ಸಂಪರ್ಕಿಸಲು ಕೃಷಿ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

ಮತ ಪ್ರದರ್ಶನ

ದಾವಣಗೆರೆ: ಸಮಾಜವಾದಿ ಪಾರ್ಟಿ ಜಿಲ್ಲಾ ಸಮಿತಿಯಿಂದ ಮತಗಳ್ಳತನ ವಿರುದ್ಧ ಮತಪ್ರದರ್ಶನ ಕಾರ್ಯಕ್ರಮವನ್ನು ಆ.23ರಂದು ಮಧ್ಯಾಹನ್ 12 ಗಂಟೆಗೆ ಹಮ್ಮಿಕೊಳ್ಳಲಾಗಿತ್ತು ಎಂದು ಪಕ್ಷದ ರಾಜ್ಯ ಕಾರ್ಯದರ್ಶಿ ಕೆ.ಎನ್. ರವಿಕುಮಾರ್ ತಿಳಿಸಿದ್ದಾರೆ.

ಮತಗಳ್ಳತನದ ವಿರುದ್ಧ ಮತ ಪ್ರದರ್ಶನ ಕಾರ್ಯಕ್ರಮ

ದಾವಣಗೆರೆ : ಸಮಾಜವಾದಿ ಪಾರ್ಟಿ, ದಾವಣಗೆರೆ ಜಿಲ್ಲಾ ಸಮಿತಿ ವತಿಯಿಂದ ಮತಗಳ್ಳತನದ ವಿರುದ್ಧ ಮತ ಪ್ರದರ್ಶನ ಕಾರ್ಯಕ್ರಮವನ್ನು ದಿನಾಂಕ 23.08.2025 ರಂದು ದಾವಣಗೆರೆ ನಗರದ ಜಯದೇವ ವೃತ್ತದಲ್ಲಿ ನಡೆಸಲಾಯಿತು.

ಚುನಾವಣಾ ಆಯೋಗ ಕೇಂದ್ರ ಬಿಜೆಪಿ ಸರ್ಕಾರದ ಹಣತೆಯಂತೆ ಬಿಜೆಪಿ ಪಕ್ಷಕ್ಕೆ ಅನುಕೂಲವಾಗಲು ಮತ ಪಟ್ಟಿಯಲ್ಲಿ ಅಕ್ರಮವನ್ನು ಎಸೆಗಿರುವುದನ್ನು ಮತ ಪ್ರದರ್ಶನದಲ್ಲಿ ಖಂಡಿಸಲಾಯಿತು.

ಒಂದಕ್ಕಿಂತ ಹೆಚ್ಚಿನ ಭೂತಗಳಲ್ಲಿ ಓರ್ವ ವ್ಯಕ್ತಿಯ ಮತ ಪಟ್ಟಿಯಲ್ಲಿ ಹೆಸರು ನಮೂದಾಗಿರುವುದು, ವಿಳಾಸದಲ್ಲಿ ಶೂನ್ಯ ಎಂದು ನಮೂದಾಗಿರುವುದು, ಒಂದೇ ಕುಟುಂಬದಲ್ಲಿ ಸುಮಾರು 80, 250 ಸದಸ್ಯರನ್ನು ಒಳಗೊಂಡಿರುವುದು, ಮತದಾರರ ಪಟ್ಟಿಯಲ್ಲಿ ಫೋಟೋ ಸ್ಪಷ್ಟವಾಗಿ ನಮೂದಾಗದೆ ಇರುವುದು, ಚುನಾವಣಾ ಆಯೋಗದ ನಿಷ್ಪಕ್ಷಪಾತತೆಯ ಮೇಲೆ ಅನುಮಾನ ಉಂಟಾಗಿದೆ.

ಹಾಗೂ ಕೇಂದ್ರ ಬಿಜೆಪಿ ಸರ್ಕಾರ ಚುನಾವಣಾ ಆಯುಕ್ತರ ಮೇಲೆ ಎಫ್ ಐ ಆರ್ ದಾಖಲಾಗದಂತೆ ಕಾನೂನು ಜಾರಿ ಮಾಡಿರುವುದು ಚುನಾವಣಾ ಆಯೋಗ ಮತ್ತು ಬಿಜೆಪಿ ನಡುವೆ ಹೊಂದಾಣಿಕೆಯನ್ನು ಎತ್ತಿ ತೋರಿಸುತ್ತಿದೆ. ಪ್ರಜೆಗಳಿಂದ ಪ್ರಜೆಗಳಿಗಾಗಿ ಪ್ರಜೆಗಳಿಗೋಸ್ಕರ ನಡೆಯುವ ಚುನಾವಣಾ ವ್ಯವಸ್ಥೆಯನ್ನು ನಾಶಪಡಿಸಿ ಸಂವಿಧಾನ ವಿರೋಧಿಯಾಗಿ ಜನರ ಹಕ್ಕುಗಳ ಮೇಲೆ ದಾಳಿ ಮಾಡುತ್ತಿರುವುದನ್ನು ವಿರೋಧಿಸಿ ನ್ಯಾಯ ಸಮ್ಮತ ಚುನಾವಣೆಗೆ ಒತ್ತಾಯಿಸಿ ಘೋಷಣೆಯನ್ನು ಕೂಗಲಾಯಿತು.

ಈ ಮತಪ್ರದರ್ಶನ ಕಾರ್ಯಕ್ರಮದಲ್ಲಿ ರಾಜ್ಯ ಉಪಾಧ್ಯಕ್ಷರಾದ ರಾಜನಹಳ್ಳಿ ಮಂಜುನಾಥ್, ರಾಜ್ಯ ಕಾರ್ಯದರ್ಶಿ ರವಿಕುಮಾರ್ ಕೆ ಎನ್, ಜಿಲ್ಲಾಧ್ಯಕ್ಷರಾದ ಶಿವಾನಂದ (ಶಿವಣ್ಣ), ಪಾರ್ಟಿಯ ಮುಖಂಡರಾದ ಮುದ್ದಾಪುರದ ರೆಹಮಾನ್ ಸಾಬ್, ಕಂದ ಸ್ವಾಮಿ ಹಿರೇತೊಗಲೇರಿ, ಯುವರಾಜ್ ಮಾಡಿಕ್, ಶ್ರೀನಿವಾಸ್ ಬೊಮ್ಮೇನಹಳ್ಳಿ, ಬಸವರಾಜ್ ಕಡಬಗೆರೆ, ರಾಜಮಿಯ್ಯ ಸಾಬ್ ಕೆ.ಹೆಚ್. ಮತ್ತಿತರ ಮುಖಂಡರುಗಳು ಹಾಜರಿದ್ದರು

ಬಿಇಒ ಎಲ್.ಜಯಪ್ಪ ಸಲಹೆ । ಹಿರಿಯ ಪ್ರಾಥಮಿಕ ಶಾಲೆಗಳ ವಲಯ ಮಟ್ಟದ ಕ್ರೀಡಾಕೂಟ

ಮಕ್ಕಳು ಕಲಿಕೆಯ ಜತೆ ಕ್ರೀಡೆಯಲ್ಲೂ ಭಾಗವಹಿಸಿ

ಚನ್ನಗಿರಿ: ಭಾಗವಹಿಸುವಂತೆ ಪಾಲಕರು ಹಾಗೂ ಶಿಕ್ಷಕರು ಮಕ್ಕಳನ್ನು ಪ್ರೋತ್ಸಾಹಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಲ್.ಜಯಪ್ಪ ಹೇಳಿದರು.

ಇಲ್ಲಿನ ಸರ್ಕಾರಿಕ್ರೀಡಾಂಗಣದಲ್ಲಿಗುರುವಾರ ಹಮ್ಮಿಕೊಂಡಿದ್ದ ಹಿರಿಯ ಪ್ರಾಥಮಿಕ ಶಾಲೆಗಳ ವಲಯ ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿ, ಕ್ರೀಡೆಗಳು ಮಕ್ಕಳನ್ನು ಮಾನಸಿಕ ದೈಹಿಕವಾಗಿ ಸದೃಢರನ್ನಾಗಿಸುತ್ತದೆ ಎಂದು ತಿಳಿಸಿದರು.

ಪ್ರಾಥಮಿಕ ಹಂತದಲ್ಲಿ ಮಕ್ಕಳ

ಗಣೇಶ ಪ್ರತಿಷ್ಠಾಪನೆ ಅನುಮತಿಗೆ ಏಕ ಗವಾಕ್ಷಿ ಸಮಿತಿ

ಚಿತ್ರದುರ್ಗ : ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಅನುಮತಿ ನೀಡಲು ತಾಲ್ಲೂಕು ಮಟ್ಟದಲ್ಲಿ ಏಕ ಗವಾಕ್ಷಿ ಸಮಿತಿ ರಚನೆ ಮಾಡಲಾಗಿದೆ.

ತಾಲ್ಲೂಕು ಮಟ್ಟದ ಏಕ ಗವಾಕ್ಷಿ ಸಮಿತಿಯಲ್ಲಿ ಅಧ್ಯಕ್ಷರಾಗಿ ಆಯಾ ತಾಲ್ಲೂಕಿನ ತಹಶೀಲ್ದಾರ್, ಸದಸ್ಯ ಕಾರ್ಯದರ್ಶಿಗಳಾಗಿ ಜಿಲ್ಲೆಯ ಎಲ್ಲ ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿಗಳು ಕಾರ್ಯನಿರ್ವಹಿಸಲಿದ್ದು, ಸದಸ್ಯರಾಗಿ ಆರಕ್ಷಕ ಉಪಾಧೀಕ್ಷಕರು, ವೃತ್ತ ನಿರೀಕ್ಷಕರು, ಪರಿಸರ ಅಧಿಕಾರಿ, ಪ್ರಾದೇಶಿಕ ಸಾರಿಗೆ ಅಧಿಕಾರಿ, ನಗರ ಸ್ಥಳೀಯ ಸಂಸ್ಥೆಗಳ ಪರಿಸರ ಅಭಿಯಂತರರು, ಆರೋಗ್ಯ ನಿರೀಕ್ಷಕರು, ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರನ್ನು ಒಳಗೊಂಡ ಸಮಿತಿ ರಚನೆ ಮಾಡಲಾಗಿದೆ. ತಾಲ್ಲೂಕು ಏಕ ಗವಾಕ್ಷಿ ಸಮಿತಿಯು ಈ ಕೆಳಕಂಡ ಷರತ್ತುಗಳನ್ವಯ ಅನುಮತಿ ನೀಡಲು ಸೂಚಿಸಿಲಾಗಿದೆ. ಷರತ್ತುಗಳು: ಗಣಪತಿ ಪ್ರತಿಷ್ಠಾಪನೆಗೆ ಅನುಮತಿಯನ್ನು ಕೋರಿಕೆ ಮೇರೆಗೆ ಕಡ್ಡಾಯವಾಗಿ ಏಕ ಗವಾಕ್ಷಿ ಸಮಿತಿಯಲ್ಲಿ ತೀರ್ಮಾನಿಸಿಯೇ ನೀಡಬೇಕು. ಸಾರ್ವಜನಿಕ ಸ್ಥಳ/ ಸರ್ಕಾರಿ/ ರಸ್ತೆಗಳ ಮೇಲೆ ಹಾಗೂ ಸಂಚಾರಕ್ಕೆ ಅಡಚಣೆಯುಂಟಾಗುವ ಮತ್ತು ಕಾನೂನು ಸುವ್ಯವಸ್ಥೆಗೆ ಅಡಚಣೆಯುಂಟಾಗಬಹುದಾದ ಸ್ಥಳಗಳಲ್ಲಿ ಅನುಮತಿ ನೀಡಬಾರದು. ಆಯೋಜಕರ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ, ಆಧಾರ್ ಕಾರ್ಡ್ ಕಡ್ಡಾಯವಾಗಿ ಪಡೆಯುವುದು. ಖಾಸಗಿ ಸ್ಥಳವಾಗಿದ್ದಲ್ಲಿ ಮಾಲೀಕರಿಂದ ಕಡ್ಡಾಯವಾಗಿ ಸಮ್ಮತಿ ಪತ್ರ ಆಯೋಜ–ಕರು ಪಡೆದು ಸಲ್ಲಿಸುವುದು. ಯಾವುದೇ ಕಾರಣಕ್ಕೆ ಡಿ.ಜೆ.ಗೆ ಅನುಮತಿ ನೀಡಬಾರದು. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ದಿನಾಂಕ: 20.07.2016ರ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಪ್ಲಾಸ್ಟರ್ ಅಪ್ ಪ್ಯಾರಿಸ್ ಮೂರ್ತಿಗಳನ್ನು ತಯಾರಿಸುವ ಮತ್ತು ಮಾರಾಟ ಮಾಡುವ ವ್ಯಕ್ತಿ, ಸಂಸ್ಥೆಗಳಿಗೆ ವ್ಯಾಪಾರ ಲೈಸನ್ಸ್ ನೀಡದಿರಲು ಮತ್ತು ಲೈಸೆನ್ಸ್ ಪಡೆಯದೇ ಅನಧಿಕೃತವಾಗಿ ತಯಾರಿ, ಮಾರಾಟ ಮಾಡುವ ವ್ಯಕ್ತಿ, ಸಂಸ್ಥೆಗಳ ಮೇಲೆ ಕಾನೂನು ಕ್ರಮ ಜರುಗಿಸುವುದು.

ಮಳಲೂರು ದಲಿತ ಕುಟುಂಬಗಳಿಗೆ ನಿವೇಶನ ನೀಡುವಂತೆ ಆಗ್ರಹಿಸಿ ಜಿಲ್ಲಾಡಳಿತಕ್ಕೆ ಮನವಿ

ಚಿಕ್ಕಮಗಳೂರು: ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಅಂಬಳೆ ಹೋಬಳಿ ಮಳಲೂರು ಗ್ರಾಮದಲ್ಲಿರುವ 18 ಎಕರೆ ಗೋಮಾಳ ಜಮೀನಿನಲ್ಲಿ ನಿವೇಶನ ರಹಿತ ಪರಿಶಿಷ್ಟ ಕುಟುಂಬದವರಿಗೆ ನಿವೇಶನ ನೀಡುವಂತೆ ಆಗ್ರಹಿಸಿ ಇಂದು ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ಭೀಮ್ ಆರ್ಮಿ, ಯುವ ಬ್ರಿಗೇಡ್, ಅಂಬೇಡ್ಕರ್ ಯುವಕ ಸಂಘ ಮಳಲೂರು ಗ್ರಾಮಸ್ಥರೊಂದಿಗೆ ನಗರಕ್ಕಾಗಮಿಸಿ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಮಳಲೂರು ಗ್ರಾಮದ ಸರ್ವೆ ನಂ.78, 79 ರಲ್ಲಿ 9.24 ಹಾಗೂ 8.35 ಎಕರೆ ಗೋಮಾಳ ಜಮೀನು ಇದ್ದು, ಇದನ್ನು ನಿವೇಶನ ರಹಿತರಿಗೆ ನೀಡುವಂತೆ ಮನವಿಯಲ್ಲಿ ಒತ್ತಾಯಿಸಿರುವ ಪರಿಶಿಷ್ಟ ಜನಾಂಗದ 150 ಕುಟುಂಬದವರು ನೂರಾರು ವರ್ಷಗಳಿಂದ ವಾಸಿಸುತ್ತಿದ್ದು, ಒಂದು ಕುಟುಂಬದಲ್ಲಿ 8–10 ಜನರಿದ್ದು, ಮನೆಗಳಿಲ್ಲದೆ ತುಂಬ ತೊಂದರೆಯಾಗಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಭೀಮ್ ಆರ್ಮಿ ಮುಖಂಡ ಹೊನ್ನೇಶ್ ಮಾತನಾಡಿ, ನಿವೇಶನ ನೀಡುವಂತೆ ಒತ್ತಾಯಿಸಿ ಪರಿಶಿಷ್ಟ ಜಾತಿ ಜನಾಂಗದವರು 2018 ರಲ್ಲೇ ಗ್ರಾಮ ಪಂಚಾಯಿತಿಗೆ ಮಳಲೂರು ಗ್ರಾಮಸ್ಥರು ಮನವಿ ನೀಡಿ–ದ್ದರೂ ಯಾವುದೇ ಪ್ರಯೋಜನ ಆಗಿಲ್ಲ ಎಂದು ಆರೋಪಿಸಿದರು.

ದೌರ್ಜನ್ಯತಡೆ ಸಮಿತಿ ಸದಸ್ಯ ಹುಣಸೇಮಕ್ಕಿ ಲಕ್ಷ್ಮಣ ಮಾತನಾಡಿ, ಸಂವಿಧಾನದ ಆಶಯದಂತೆ ಪ್ರಾಥಮಿಕ ಸೌಲಭ್ಯಗಳಾದ ನಿವೇಶನ, ಮನೆ, ಶಿಕ್ಷಣ, ಆರೋಗ್ಯ ನೀಡಬೇಕೆಂದು ಡಾ.ಬಿ.ಆರ್ ಅಂಬೇಡ್ಕರ್ ಹೇಳಿದ್ದರೂ ಕಾರ್ಯರೂಪಕ್ಕೆ ತರುವಲ್ಲಿ ವಿಳಂಭವಾಗುತ್ತಿದೆ ಎಂದು ದೂರಿದರು.

ಸ್ವತಂತ್ರ ಬಂದು 79 ವರ್ಷಗಳಾದರೂ ದಲಿತ, ಹಿಂದುಳಿದ, ಅಲ್ಪಸಂಖ್ಯಾತ ಬಡವರಿಗೆ ಮೂಲಭೂತ ಹಕ್ಕುಗಳನ್ನು ಪಡೆಯುವಲ್ಲಿ ವಿಫಲರಾಗಿದ್ದು, ಮಳಲೂರು ಗ್ರಾಮದಲ್ಲಿ 150 ಪರಿಶಿಷ್ಟ ಜನಾಂಗದ ಕುಟುಂಬಗಳು ವಾಸಿಸುತ್ತಿದ್ದು, ಬಲಾಢ್ಯರು ಒತ್ತುವರಿ ಮಾಡಿರುವ ಭೂಮಿಯನ್ನು ಜಿಲ್ಲಾಡಳಿತ ಹಾಗೂ ಅರಣ್ಯ ಇಲಾಖೆ ತೆರವು ಮಾಡಿ ನಿವೇಶನ ರಹಿತರಿಗೆ ನಿವೇಶನ ಮಂಜೂರು ಮಾಡಬೇಕೆಂದು ಆಗ್ರಹಿಸಿದರು.

ಕಸ್ತೂರಿ ಬಾ ಸದನ ಮುಚ್ಚದಂತೆ ಒತ್ತಾಯಿಸಿ ಮನವಿ

ಚಿಕ್ಕಮಗಳೂರು: ನಗರದಲ್ಲಿ ಕಳೆದ 1962ರಲ್ಲಿ ಆರಂಭಗೊಂಡ ಕಸ್ತೂರಿ ಬಾ ಸದನ ಸಾವಿರಾರು ಮಹಿಳೆಯರು, ಮಕ್ಕಳಿಗೆ ಆಶ್ರಯ ನೀಡಿ ತಾತ್ಕಾಲಿಕ ವಸತಿ ಕಲ್ಪಿಸುತ್ತಿದ್ದು, ಆದರೆ ಈಗ ಜಿಲ್ಲಾಧಿಕಾರಿಗಳು 'ಒನ್ ಸ್ಟಾಪ್ ಸೆಂಟ–ರ್' ಪ್ರಾರಂಭವಾಗಿರುವುದರಿಂದ ಈ ಸಂಸ್ಥೆಯನ್ನು ಮುಚ್ಚಲು ತಿಳಿಸಿದ್ದಾರೆ. ಆದರೆ, ಅದರಿಂದ ತಮ್ಮ ಸಂಸ್ಥೆಯಲ್ಲಿ ದುಡಿಯುತ್ತಿದ್ದ ಸಿಬ್ಬಂದಿಗಳು ಸೇರಿದಂತೆ ನೊಂದ ಮಹಿಳೆಯರಿಗೆ ಅನ್ಯಾಯವಾಗುತ್ತದೆ ಎಂದು ಸದನದ ಕಾರ್ಯದರ್ಶಿ ಮೋಹಿನಿ ಸಿದ್ದೇಗೌಡ ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಅವರು ನೊಂದು ಬರುವ ಮಹಿಳೆಯರು ಹಾಗು ಹೆಣ್ಣು ಮಕ್ಕಳಿಗೆ ಆಶ್ರಯ ಹಾಗು ರಕ್ಷಣೆ ನೀಡುತ್ತಿದ್ದ ತಮ್ಮ ಸಂಸ್ಥೆಗೆ ಕಳೆದ 2001ರಲ್ಲಿ ಸಾಂತ್ವನ ಕೇಂದ್ರ ಆರಂಭಿಸಲು ಸರ್ಕಾರ ಮಂಜೂರಾತಿ ನೀಡಿದ್ದು, ಅಂದಿನಿಂದ ನೊಂದ ಮಹಿಳೆಯರ ಕೌಟುಂಬಿಕ ಸಮಸ್ಯೆ ಬಗೆಹರಿಸುವಲ್ಲಿ ಯಶಸ್ವಿಯಾಗಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ ಎಂದಿದ್ದಾರೆ.

ನಮ್ಮಲ್ಲಿ ಆಶ್ರಯ ಮತ್ತು ರಕ್ಷಣೆ ದೊರೆಯುತ್ತಿರುವುದರಿಂದ ಬೇರೆ ತಾಲೂಕುಗಳಿಂದ ದೂರುಗಳು ದಾಖಲಾಗಿದ್ದು, ಅದನ್ನು ಸಮರ್ಥವಾಗಿ ಇತ್ಯರ್ಥಪಡಿಸಲಾಗುತ್ತಿದೆ. ಹೀಗಾಗಿ ಪ್ರತಿ ತಿಂಗಳು ಹತ್ತರಿಂದ ಹದಿನೈದು ಕೌಟುಂಬಿಕ ಸಮಸ್ಯೆಯ ದೂರುಗಳು ದಾಖಲಾಗುತ್ತಿದೆ ಎಂದಿದ್ದಾರೆ.

ಆದರೆ ಇತ್ತೀಚೆಗೆ ತಮ್ಮ ಸಂಸ್ಥೆಯುನಿರ್ವಹಿಸುತ್ತಿರುವ ಹೊಣೆ ಗಾರಿಕೆಯ ಮಾಹಿತಿ ತಿಳಿಯದೆ ಸಂಬಂಧಿಸಿದ ಇಲಾಖೆ ಉಪನಿರ್ದೇಶಕರೋರ್ವರು ನೀಡಿದ ತಪ್ಪು ಮಾಹಿತಿಯಿಂದ ತಮ್ಮ ಸಂಸ್ಥೆ ಮುಚ್ಚುವಂತೆ ಸೂಚನೆ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಆದರೆ ಆನಂತರ ಖುದ್ದು ಪರಿಶೀಲನೆ ಮಾಡಿದ ಅಧಿಕಾರಿ ನಗರದಲ್ಲಿ ಸಾಂತ್ವನ ಕೇಂದ್ರದ ಅಗತ್ಯವಿದೆ ಎಂದು ಸರ್ಕಾರಕ್ಕೆ ಮರುಪರಿಶೀಲನಾ ವರದಿ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರು ನೊಂದ ಮಹಿಳೆಯರಿಗೆ ನೆರವಾಗಲು ಸರ್ಕಾರದ ಯೋಜನೆ ಮುಂದುವರೆಸಲು ಆದೇಶ ನೀಡಬೇಕೆಂದು ಮನವಿ ಮಾಡಿದ್ದಾರೆ.

ಆ.31 ಬೆಟ್ಟತಾವರೆಕೆರೆಯಲ್ಲಿ ತಾಲ್ಲೂಕು ಮಟ್ಟದ ಜಾನಪದ ಸಮ್ಮೇಳನ

ತರೀಕೆರೆ: ಕರ್ನಾಟಕ ಜಾನಪದ ಪರಿಷತ್ತು ವತಿಯಿಂದ ತಾಲೂಕು ಮಟ್ಟದ ಜಾನಪದ ಸಮ್ಮೇಳನವನ್ನು ಆಗಸ್ಟ್ 31 ರಂದು ತಾಲ್ಲೂಕಿನ ಬೆಟ್ಟತಾವರೆಕೆರೆ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪರಿಷತ್ತಿನ ಜಿಲ್ಲಾಧ್ಯಕ್ಷ ಜಿ.ಬಿ. ಸುರೇಶ್ ಹೇಳಿದರು.

ಬೆಟ್ಟತಾವರಕೆರೆ ಗ್ರಾಮದಲ್ಲಿ ಕರ್ನಾಟಕ ಜಾನಪದ ಪರಿಷತ್ತು ವತಿಯಿಂದ ಸಮ್ಮೇಳನದ ಪೂರ್ವಬಾವಿ ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಶಕ್ತಿ ಜಾನಪದಕ್ಕಿದೆ. ನಮ್ಮ ಭಾರತೀಯ ಆಚಾರ–ವಿಚಾರ, ಉಡುಗೆ–ತೊಡುಗೆ, ಧರ್ಮ, ಭಾಷೆ, ಆಹಾರ ಪದ್ಧತಿ, ಧಾರ್ಮಿಕ ಸಹಿಷ್ಣತೆ ಮುಂತಾದವುಗಳ ಅರಿವನ್ನು ಮೂಡಿಸಬೇಕಾದರೆ ಶಾಲಾ–ಕಾಲೇಜುಗಳಲ್ಲಿಯೂ ಸಹ ಹೆಚ್ಚು ಒತ್ತನ್ನು ನೀಡಬೇಕಾಗಿದೆ ಎಂದು ತಿಳಿಸಿದರು.

ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಗ್ರಾಮ ಪಂಚಾಯಿತಿ ಸದಸ್ಯ ಬಿ.ವಿ. ಕಲ್ಲೇಶಪ್ಪ ಪಾಶ್ಚಾತ್ಯ ಸಂಗೀತದ ಗುಂಗಿನಲ್ಲಿರುವ ಇಂದಿನ ಯುವಕ–ಯುವತಿಯರು, ಜಾನಪದ ಕಲೆ, ಸಾಹಿತ್ಯ, ಸಂಗೀತಗಳಿಂದ ದೂರ ಸರಿಯುತ್ತಿರುವ ಈ ಸಂದರ್ಭದಲ್ಲಿ ಪ್ರತಿ ಗ್ರಾಮಾಂತರ ಪ್ರದೇಶದಲ್ಲಿ ಜಾನಪದ ಸಮ್ಮೇಳನ, ಜಾನಪದ ಕಲೋತ್ಸವ ಮತ್ತು ತರಬೇತಿ ಶಿಬಿರ, ವಿಚಾರ ಸಂಕಿರಣಗಳು, ಉಪನ್ಯಾಸಗಳು, ಜಾನಪದ ಗೀತಾ ಗಾಯನ ತರಬೇತಿ ಕಾರ್ಯಕ್ರಮಗಳನ್ನು ನಡೆಸಿ ಅವರಲ್ಲಿ ಸದಾಭಿರುಚಿಯನ್ನು ಮೂಡಿಸಬೇಕಾಗಿದೆ ಎಂದರು.

ಬೌದ್ಧ ಮಾರ್ಗ ಒಂದು ಧರ್ಮವಲ್ಲ, ಅದೊಂದು ಜೀವನ ಕ್ರಮ : ತಿಪ್ಪೇಸ್ವಾಮಿ

ಚಿತ್ರದುರ್ಗ : ಬೌದ್ಧ ಮಾರ್ಗ ಒಂದು ಧರ್ಮವಲ್ಲ, ಅದೊಂದು ಜೀವನ ಕ್ರಮ ಎಂದು ಡಾ.ಬಿ. ಆರ್.ಅಂಬೇಡ್ಕರ್ ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಬಿ.ಪಿ.ತಿಪ್ಪೇಸ್ವಾಮಿ ಹೇಳಿದರು.

ಚಿತ್ರದುರ್ಗ ನಗರದ ಕೋಟೆ ನಾಡು ಬುದ್ಧ ವಿಹಾರದಲ್ಲಿ ನಡೆದ ಬುದ್ಧ ಧರ್ಮ ಹಾಗೂ ಪಾರಮಾರ್ಥಿಕತೆ ಎಂಬ ವಿಷಯ ಕುರಿತು ಉಪನ್ಯಾಸ ನೀಡಿ ಮಾತನಾಡಿದರು.

ಬೌದ್ಧ ಧಮ್ಮದಲ್ಲಿ ದೇವರಿಲ್ಲ. ಇತರ ಧರ್ಮಗಳು ಪ್ರಬಲವಾಗಿ ಪ್ರತಿಪಾದಿಸುತ್ತಿರುವ ಸರ್ವಶಕ್ತನೂ, ಸೃಷ್ಟಿಕರ್ತನೂ ಇಲ್ಲ. ಮೋಕ್ಷದ ಹಾದಿಯಲ್ಲಿ ದೇವರ ಅಗತ್ಯವಿಲ್ಲ, ಎಲ್ಲವೂ ಒಬ್ಬರ ಸ್ವಂತ ಪ್ರಜ್ಞೆಮತ್ತು ತಿಳುವಳಿಕೆಯನ್ನು ಅವಲಂಬಿಸಿರುತ್ತದೆ. ಬುದ್ಧ ನನ್ನು ಯಾರೂ ದೇವರೆಂದು ಪರಿಗಣಿಸುವುದಿಲ್ಲ. ಬದಲಿಗೆ ಗೌರವಕ್ಕೆ ಅರ್ಹರು ಎಂದು ಗೌರವಿಸುತ್ತಾರೆ. ಅವನು ಸತ್ಯವನ್ನು ಹುಡುಕಿ ಇತರರ ಪ್ರಯೋಜನಕ್ಕಾಗಿ ಅದನ್ನು ಕಲಿಸಿದ



ಬುದ್ಧಿವಂತ ವ್ಯಕ್ತಿ. ಅವರ ಬಗ್ಗೆ ಕೃತಜ್ಞತೆ ಮತ್ತು ಗೌರವವಿದ್ದರೂ, ಅದು ಪೂಜೆಯಲ್ಲ ಎಂದರು.

ಎಲ್ಲರೂ ಬುದ್ಧರಾಗಬಹುದು. ಬುದ್ಧ ಎಂಬುದು ಒಂದು ಬಿರುದು. ಇದು ಮಾನಸಿಕ ಜಾಗೃತಿ ಸಂಕೇತಿಸುತ್ತದೆ. ಸ್ವಯಂ ನಿಯಂತ್ರಣ, ಬುದ್ಧಿವಂತಿಕೆ ಮತ್ತು ಕರುಣೆಯ ಮೂಲಕ ಯಾರಾದರೂ ಈ ಜಾಗೃತಿಯನ್ನು ತಲುಪಬಹುದು. ಬೌದ್ಧಧರ್ಮದಲ್ಲಿ ಅನುಯಾಯಿಗಳನ್ನು ರಕ್ಷಿಸಲು ಯಾವುದೇ ರಕ್ಷಕನಿಲ್ಲ. ವ್ಯಕ್ತಿಯಲ್ಲಿನ ನೈತಿಕತೆಯೇ ಮಾನವನ ನಿಜವಾದ ರಕ್ಷಕ ಎಂದು ಬುದ್ಧ ಪ್ರತಿಪಾದಿಸಿದ್ದಾರೆ. ನಮ್ಮನ್ನು ಕಾಯುವ ರಕ್ಷಕನಿದ್ದಾನೆಂದು ನಂಬುವುದರಿಂದ ಏನನ್ನು ಸಾಧಿಸಲಾಗುವುದಿಲ್ಲ. ಮುಕ್ತಿ ಪಡೆಯಲು ನೀವು ನಿಮ್ಮಲ್ಲಿ ಪ್ರಜ್ಞೆ ಮತ್ತು ಕರುಣೆಯ ಅಭ್ಯಾಸ ಮಾಡಿಕೊಳ್ಳಬೇಕು ಎಂಬುದು ಬುದ್ಧರ ನಿಲುವಾಗಿತ್ತು.

ಬುದ್ಧನಿಲ್ಲದೆ ಬೌದ್ಧಧರ್ಮ ಉಳಿಯುತ್ತದೆ. ಬುದ್ಧ ದೇವರಲ್ಲ ಅಥವಾ ಧರ್ಮದ ಬೋಧಕನಲ್ಲ, ಅವನು ಸತ್ಯದ ಅನ್ವೇಷಕ. ಅವನು ಕಂಡುಕೊಂಡದ್ದು ಸಾರ್ವತ್ರಿಕ ಸತ್ಯ–ಧಾರ್ಮಿಕ ನಂಬಿಕೆಯಲ್ಲ. ಜಗತ್ತು ಹೇಗೆ ಸೃಷ್ಟಿಯಾಯಿತು ಎಂಬುದರ ಬಗ್ಗೆ ಬೌದ್ಧಧರ್ಮ ಕಾಳಜಿ ವಹಿಸುವುದಿಲ್ಲ. ಈ ಪ್ರಸ್ತುತ ಜೀವನದಲ್ಲಿ ಮುಖ್ಯಗುರಿ ಮಾನವನ ದುಃಖವನ್ನು ತೊಡೆದುಹಾಕುವುದಾಗಿದೆ.

ಮಾನವನ ನಿಜವಾದ ಶತ್ರು "ದುರಾಸೆ ಮತ್ತು ಅಹಂಕಾರ" – ಇವು ದುಃಖದ ಮೂಲಗಳು. ಸ್ವರ್ಗ ಮತ್ತು ನರಕದ ಪರಿಕಲ್ಪನೆಗಿಂತ ಮುಖ್ಯವಾದದ್ದು ಪ್ರಜ್ಞೆಯ ರೂಪಾಂತರ. ನೀವು ಜಗತ್ತನ್ನು ನೋಡುವ ವಿಧಾನದಿಂದ ನಿಮ್ಮ ಅನುಭವವು ರೂಪುಗೊಳ್ಳುತ್ತದೆ. ಒಂದು ಬೋಧನೆ ತಪ್ಪು ಎಂದು ಸಾಬೀತಾದರೆ, ಅದನ್ನು ತ್ಯಜಿಸಬೇಕು ಎಂಬುದೇ ಬೌದ್ಧತ್ವದ ಪ್ರಮುಖ ಪ್ರತಿಪಾದನೆಯಾಗಿದೆ. ಈ ದೃಷ್ಟಿಕೋನ ದಿಂದ ಬೌದ್ಧಧರ್ಮವು ಮುಕ್ತ ಚಿಂತನೆಯ ಮಾರ್ಗವಾಗಿದೆ. ವಿಜ್ಞಾನದಂತೆ ವೀಕ್ಷಣೆ ಮತ್ತು ಅನುಭವವನ್ನು ಆಧರಿಸಿದೆ ಮತ್ತು ಯಾರೂ ಯಾರನ್ನೂ ಯಾವುದನ್ನೂ ಸ್ವೀಕರಿಸಲು ಒತ್ತಾಯಿಸುವುದಿಲ್ಲ.

ಈ ಸಂದರ್ಭದಲ್ಲಿ ಸರ್ಕಾರಿ ನಿವೃತ್ತ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಿ.ಪಿ.ಪ್ರೇಮನಾಥ್ ಚಳ್ಳಕೆರೆ ಬೌದ್ಧ ಮಹಾಸಭಾದ ಹರೀಶ್, ಬೆಸ್ಕಾಂ ತಿಪ್ಪೇರುದ್ರಪ್ಪ, ಉಪನ್ಯಾಸಕ ನಾಗೇಂದ್ರಪ್ಪ, ಬನ್ನಿಕೋಡ್ ರಮೇಶ್, ಶಕುಂತಲಾ, ಪುಷ್ಪಪ್ರಕಾಶ್, ಶಿಲ್ಪ, ಉಷಾ, ಶಾಂತಮ್ಮ ಇತರರಿದ್ದರು.

ಧರ್ಮದ ಉಳಿವಿಗೆ ಧರ್ಮ ಯುದ್ಧ: ಧರ್ಮಸ್ಥಳಕ್ಕೆ ಬಿಜೆಪಿ ಪಾದಯಾತ್ರೆ

ಬೆಂಗಳೂರು: ದಕ್ಷಿಣ ಬೆಂಗಳೂರು ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಸೋಮವಾರ ಜಿಲ್ಲಾಧ್ಯಕ್ಷ ಹಾಗೂ ಜಯನಗರ ಶಾಸಕ ಸಿಕೆ ರಾಮಮೂರ್ತಿ ನೇತೃತ್ವದಲ್ಲಿ 'ಧರ್ಮದ ಉಳಿವಿಗೆ ಧರ್ಮ ಯುದ್ಧ' ಎಂಬ ಶೀರ್ಷಿಕೆಯಡಿ ಧರ್ಮಸ್ಥಳಕ್ಕೆ ಪಾದಯಾತ್ರೆ ನಡೆಯಲಿದೆ.

ಬಿಜೆಪಿ ದಕ್ಷಿಣ ಜಿಲ್ಲಾ ಮಾಧ್ಯಮ ಉಸ್ತುವಾರಿ ಟಿಎಸ್ ಸುಬ್ರಹ್ಮಣ್ಯ ಬಿಡುಗಡೆ ಮಾಡಿರುವ ಹೇಳಿಕೆ ಪ್ರಕಾರ, ಬೆಳಿಗ್ಗೆ 6 ಗಂಟೆಗೆ ಜಯನಗರ 4ನೇ ಬ್ಲಾಕ್‌ನಲ್ಲಿರುವ (ಮೈಯಾಸ್ ಹೋಟೆಲ್ ಬಳಿ) ಶ್ರೀ ವಿನಾಯಕ ದೇವಸ್ಥಾನದಲ್ಲಿ ಪೂಜೆ ಬಳಿಕ ಪಾದಯಾತ್ರೆ ಪ್ರಾರಂಭವಾಗಲಿದೆ.

ಬೆಳಿಗ್ಗೆ 7.30ಕ್ಕೆ, ಪಿಇಎಸ್ ವಿಶ್ವವಿದ್ಯಾಲಯ ರಿಂಗ್ ರಸ್ತೆ ಜಂಕ್ಷನ್ ಬಳಿಯ ನೈಸ್ ರಸ್ತೆಯ ಬಳಿ, ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಮತ್ತು ಬಸವನಗುಡಿ ಶಾಸಕ ರವಿ ಸುಬ್ರಹ್ಮಣ್ಯ ಅವರು ಹಸಿರು ನಿಶಾನೆ ತೋರಲಿದ್ದಾರೆ.

ಕಾಶ್ಮೀರದ ಕಿಶ್ತಾವರ್ ಜಿಲ್ಲೆಯಲ್ಲಿ ಮೇಘಸ್ಫೋಟಕ್ಕೆ 60ಕ್ಕೂ ಹೆಚ್ಚು ಮಂದಿ ಬಲಿ, ಮಚೈಲ್ ಮಾತಾ ಯಾತ್ರೆ ಸ್ಥಗಿತ

ಶ್ರೀನಗರ,ಆ.15– ಜಮ್ಮು ಮತ್ತು ಕಾಶ್ಮೀರದ ಕಿಶ್ತಾವರ್ ಜಿಲ್ಲೆಯ ಚಶೋತಿ ಪ್ರದೇಶದಲ್ಲಿ ನಿನ್ನೆ ಸಂಭವಿಸಿದ ಭಾರೀ ಮೇಘಸ್ಫೋಟದಿಂದ ಉಂಟಾದಪ್ರವಾಹದಲ್ಲಿ ಕನಿಷ್ಠ 60ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ.

ಅಧಿಕಾರಿಗಳ ಪ್ರಕಾರ, 38 ಜನರ ಸ್ಥಿತಿ ಗಂಭೀರವಾಗಿದೆ. ನೂರಾರು ಮಂದಿ ಗಾಯಗೊಂಡಿದ್ದು, ಇನ್ನೂ ಹಲವರು ನಾಪತ್ತೆಯಾಗಿದ್ದಾರೆ. ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ. ಮಚೈಲ್ ಮಾತಾ ದೇವಸ್ಥಾನಕ್ಕೆ ಹೋಗುವ ದಾರಿಯಲ್ಲಿರುವ ಚಶೋತಿ ಗ್ರಾಮದಲ್ಲಿ ಈ ದುರಂತ ಸಂಭವಿಸಿದೆ. ಅನೇಕರು ಸಿಲುಕಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ಅಪಘಾತದ ಸಮಯದಲ್ಲಿ, ಮಚೈಲ್ ಮಾತಾ ಯಾತ್ರೆಗಾಗಿ ಹೆಚ್ಚಿನ ಸಂಖ್ಯೆಯ ಜನರು ಜಮಾಯಿಸಿದ್ದರು. ಮೇಘಸ್ಫೋಟ ಸಂಭವಿಸಿದಾಗ ದುರಂತದ ಸ್ಥಳದಲ್ಲಿ 250ಕ್ಕೂ ಹೆಚ್ಚು ಜನರು ಇದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯ ವಿಪತ್ತು ಪ್ರತಿಕ್ರಿಯಾ ತಂಡ (ಎಸ್‌ಡಿಆರೆಫ್), ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡ (ಎನ್‌ಡಿಆರೆಫ್) ಹಾಗೂ ಸೇನಾ ಸಿಬ್ಬಂದಿ ಮತ್ತು ಸ್ಥಳೀಯ ಪೊಲೀಸರು ಘಟನಾ ಸ್ಥಳಕ್ಕೆ ತೆರಳಿ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಸೇನೆಯು ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳಲ್ಲಿ ಕೈಜೋಡಿಸಿದೆ ಎಂದು ಜಮ್ಮು ಮೂಲದ ಸೇನಾ ವಕ್ತಾರರು ತಿಳಿಸಿದ್ದಾರೆ, ಕಾಣೆಯಾದವರಿಗಾಗಿ ಶೋಧ ಕಾರ್ಯಾಚರಣೆ ಮುಂದುವರೆದಿದೆ.

ಇಲ್

ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಹುದ್ದೆ : ಗುತ್ತಿಗೆ ಆಧಾರ ನೇಮಕಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : ಆತ್ಮ ಯೋಜನೆಯಡಿ 2025–26 ನೇ ಸಾಲಿಗೆ ನೇರ ಗುತ್ತಿಗೆ ಆಧಾರದಲ್ಲಿ ಒಂದು ವರ್ಷದ ಅವಧಿಗೆ ಭದ್ರಾವತಿ ತಾಲ್ಲೂಕಿನ ಕೂಡ್ಲಿಗೆರೆ ರೈತ ಸಂಪರ್ಕ ಕೇಂದ್ರಕ್ಕೆ ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಹುದ್ದೆಗೆ ನೇಮಿಸಲು ಅರ್ಜಿ ಆಹ್ವಾನಿಸಲಾಗಿದೆ.

45 ವರ್ಷದೊಳಗಿನವರು ಅರ್ಜಿ ಸಲ್ಲಿಸಬಹುದು. ಕೃಷಿ ಅಥವಾ ಕೃಷಿ ಸಂಬಂಧಿತ ವಿಷಯದಲ್ಲಿ ಪದವಿ ಹೊಂದಿದ್ದು, 1 ವರ್ಷದ ಅನುಭವ, ಕಂಪ್ಯೂಟರ್ ಸಾಕ್ಷರತೆ ಹೊಂದಿರಬೇಕು. ಅರ್ಜಿಯೊಂದಿಗೆ ಸ್ನಾತಕ/ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಅಂತಿಮ ಅಂಕಪಟ್ಟಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಯಾಗಿದ್ದಲ್ಲಿ ಜಾತಿ ಪ್ರಮಾಣ ಪತ್ರ, ಸೇವಾ ಅನುಭವ ಪ್ರಮಾಣ ಪತ್ರ ಲಗತ್ತಿಸಬೇಕು.

ಅರ್ಜಿಯನ್ನು ಯೋಜನಾ ನಿರ್ದೇಶಕರು(ಆತ್ಮ) ಹಾಗೂ ಜಂಟಿ ನಿರ್ದೇಶಕರು, ಶಿವಮೊಗ್ಗ ಇವರ ಕಚೇರಿಯಲ್ಲಿ ಪಡೆದು ಸ್ವವಿವರಗಳೊಂದಿಗೆ ದಿನಾಂಕ: 21–07–2025 ರೊಳಗೆ ಯೋಜನಾ ನಿರ್ದೇಶಕರು(ಆತ್ಮ) ಹಾಗೂ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಹಳೇ ತೀರ್ಥಹಳ್ಳಿ ರಸ್ತೆ, ಶಿವಮೊಗ್ಗ 577202 ಇಲ್ಲಿಗೆ ಸಲ್ಲಿಸಬಹುದೆಂದು ಕೃಷಿ ಜಂಟಿ ನಿರ್ದೇಶಕರು ಹಾಗೂ ಯೋಜನಾ ನಿರ್ದೇಶಕರು(ಆತ್ಮ) ತಿಳಿಸಿದ್ದಾರೆ.

ಹೊರನಾಡು ಕ್ಷೇತ್ರದ ಸಮಾಜಮುಖಿ ಕಾರ್ಯಗಳು ಶ್ಲಾಘನೀಯ : ನಯನ

ಮೂಡಿಗೆರೆ: ಶ್ರೀ ಕ್ಷೇತ್ರ ಧರ್ಮಸ್ಥಳ ಮತ್ತು ಶ್ರೀ ಕ್ಷೇತ್ರ ಹೊರನಾಡಿನ ಅನ್ನಪೂರ್ಣೇಶ್ವರಿ ದೇವಾಲಯ ಖಾಸಗಿ ದೇವಾಲಯವಾಗಿದ್ದರೂ ಸಾರ್ವಜನಿಕ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಕೊಂಡಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಮೂಡಿಗೆರೆ ಕ್ಷೇತ್ರದ ಶಾಸಕಿ ನಯನ ಮೋಟಮ್ಮ ತಿಳಿಸಿದರು.

ಅವರು ಕಳಸ ತಾಲ್ಲೂಕಿನ ಶ್ರೀಕ್ಷೇತ್ರ ಹೊರನಾಡು ಆಧಿಶಕ್ತ್ಯಾತ್ಮಕ ಶ್ರೀ ಅನ್ನಪೂರ್ಣೆಶ್ವರಿ ದೇವಾಲಯದ ಲಲಿತಕಲಾ ಮಂಟಪದಲ್ಲಿ ಶ್ರೀಕ್ಷೇತ್ರದ ಗ್ರಾಮೀಣಾಭಿವೃದ್ಧಿ ಯೋಜನೆಗಳಡಿಯಲ್ಲಿ ಪರಿಕರಕ ಮತ್ತು ಹಣ್ಣಿನ ಗಿಡಗಳ ವಿತರಣಾ ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಶ್ರೀಕ್ಷೇತ್ರ ಹೊರನಾಡಿನ ಧರ್ಮಕರ್ತರು 1992 ರಿಂದಲೂ ಜಾರಿಗೆ ತಂದಿರುವ ವಿವಿಧ ಯೋಜನೆಗಳು ದಿನದಿಂದ ದಿನಕ್ಕೆ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ ಎಂದರು.

ಇಂಥಹ ಧಾರ್ಮಿಕ ಕಾರ್ಯವನ್ನು ಇತರೆ ಪುಣ್ಯಕ್ಷೇತ್ರಗಳು ಅಳವಡಿಸಿಕೊಂಡಲ್ಲಿ ಸರ್ಕಾರದ ಹೊರೆ ಇಳಿಸಿದಂತಾಗುತ್ತದೆ, ಶ್ರೀ ಕ್ಷೇತ್ರವು ಹಲವಾರು ವರ್ಷಗಳಿಂದ ಜನಪಯೋಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಸಮಾಜಮುಖಿಯಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು.

ಧರ್ಮಕರ್ತ ಡಾ. ಜಿ.ಭೀಮೇಶ್ವರ ಜೋಷಿ ಮಾತನಾಡಿ, ಕರ್ನಾಟಕದಲ್ಲಿ ಪ್ರಪ್ರಥಮ ಶಾಲಾ ಮಕ್ಕಳಿಗೆ ಬಿಸಿಊಟ ಯೋಜನೆ 1958 ರಿಂದಲೇ ಶ್ರೀಕ್ಷೇತ್ರ ಪ್ರಾರಂಭಿಸಿದ್ದು ಮಾತ ಅನ್ನಪೂರ್ಣೇಶ್ವರಿ ಆಶೀರ್ವಾದ ಎಂದರೆ ತಪ್ಪಾಗಲಾರದು ಅಂದಿನಿಂದ ಇಂದಿನವರೆಗೂ ಮತ್ತು ಮುಂದೆಯೂ ಈ ಯೋಜನೆ ಮುಂದುವರೆಸಿಕೊಂಡು ಹೋಗುವುದಾಗಿ ಹಾಗೂ ಬಿಸಿ ಊಟಕ್ಕೆ ವಿದ್ಯಾರ್ಥಿಗಳ ಅನುಕೂಲವಾಗುವ ದೃಷ್ಟಿಯಿಂದ ತಟ್ಟೆ, ಲೋಟಗಳನ್ನು ವಿತರಿಸುತ್ತಿದೆ ಎಂದರು.

ತಮ್ಮ ಕ್ಷೇತ್ರದಲ್ಲಿ 1992 ರಿಂದ 2025 ರವರೆಗೆ ಧಾರ್ಮಿಕ ಯೋಜನೆ, ಧನ್ವಂತರಿ ಯೋಜನೆ, ಶೈಕ್ಷಣಿಕ ಯೋಜನೆ, ಸಾಮಾಜಿಕ ಯೋಜನೆ, ಸಾಂಸ್ಕೃತಿಕ ಯೋಜನೆ, ಸಾಮೂಹಿಕ ಉಪನಯನ, ಸಪ್ತಪದಿ ಯೋಜನೆ, ಗೃಹಲಕ್ಷ್ಮೀ ಯೋಜನೆ, ಆನಂದ ಜ್ಯೋತಿ ಯೋಜನೆ, ಅನ್ನದಾಸೋಹ ಯೋಜನೆಗಳಡಿಯಲ್ಲಿ ಕ್ಷೇತ್ರವತಿಯಿಂದ 20 ಕೋಟಿರೂಗಳನ್ನು ವ್ಯಯಿಸಲಾಗಿದ್ದು, ಇನ್ನು ಮುಂದಿನ ದಿನಗಳಲ್ಲೂ ಸಹ ಯೋಜನೆಗಳನ್ನು ಹೆಚ್ಚಿನ ರೀತಿಯಲ್ಲಿ ಮುಂದುವರೆಸಿಕೊಂಡು ಬರುವುದಾಗಿ ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರೋಟರಿ ಸಂಸ್ಥೆ ಜಿಲ್ಲಾ ಗವರ್ನರ್ ಮಾತನಾಡಿ, 2025–26 ನೇ ಸಾಲಿನಲ್ಲಿ ಶ್ರೀ ಕ್ಷೇತ್ರದ ಧರ್ಮಕರ್ತರು ಮತ್ತವರ ಸಹೋದರರ ಸೇವೆ ಅಮೋಘವಾಗಿದ್ದು. ಸಮಾಜಮುಖಿ ಕೆಲಸಗಳನ್ನು ಮಾಡುತ್ತಾ ಸಮಾಜಕ್ಕೆ ಅನನ್ಯ ಸೇವೆಯನ್ನು ಸಲ್ಲಿಸುತ್ತಿದೆ ಎಂದರು.

ಹೊರನಾಡು ಗ್ರಾಮ ಪಂಚಾಯತಿ ಅಧ್ಯಕ್ಷ ಮಧುಪ್ರಸಾದ್ ಜೈನ್ ಮಾತನಾಡಿ ಹೊರನಾಡು ಅಕ್ಕಪಕ್ಕದಲ್ಲಿ ಕುಗ್ರಾಮವಾಗಿದ್ದು. ಆ ಗ್ರಾಮಗಳಿಗೆ ಬೆಳಕನ್ನು ನೀಡುವ ಮೂಲಕ ಜನರ ಕಷ್ಟ–ಸುಖಗಳಿಗೆ ಶ್ರೀಕ್ಷೇತ್ರ ಹಲವು ಅಭಿವೃದ್ಧಿಗಳನ್ನು ಮಾಡವುದರ ಮೂಲಕ ಅಲ್ಲಿಯ ಜನರಿಗೆ ಜೀವನಾಧಾರವಾಗಿದೆ ಎಂದರೆ ತಪ್ಪಾಗಲಾರದು ಎಂದರು.

ವೇದಿಕೆಯಲ್ಲಿ ರಾಮನಾರಾಯಣ ಜೋಷಿ, ರಾಜಗೋಪಾಲ್ ಜೋಷಿ, ಗಿರಿಜಾಶಂಕರ್ ಜೋಷಿ ಉಪಸ್ಥಿತರಿದ್ದರು.

ರಸಗೊಬ್ಬರ ದಾಸ್ತಾನು ಮಾಡದ ರೈತ ವಿರೋಧಿ ಸರ್ಕಾರ : ಕಲ್ಮರುಡಪ್ಪ

ಚಿಕ್ಕಮಗಳೂರು: ರಾಜ್ಯಸರ್ಕಾರ ರೈತರ ಬೇಡಿಕೆಗನುಗುಣವಾಗಿ ರಸಗೊಬ್ಬರ ದಾಸ್ತಾನು ಮಾಡುವಲ್ಲಿ ವಿಫಲವಾಗಿದ್ದು, ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸುವ ಕೆಲಸದಲ್ಲಿ ತೊಡಗಿ ರೈತ ವಿರೋಧಿಯಾಗಿ ವರ್ತಿಸುತ್ತಿದೆ ಎಂದು ಬಿಜೆಪಿ ರಾಜ್ಯ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಹೆಚ್.ಸಿ. ಕಲ್ಮರುಡಪ್ಪ ಆರೋಪಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯಸರ್ಕಾರ ವಲಯವಾರು ಅವಶ್ಯಕತೆ ಪ್ರಮಾಣವನ್ನು ಅಂದಾಜಿಸಿ ಮುಂಗಾರಿಗೂ ಮೊದಲೇ ಪತ್ರಮುಖೇನ ಕೇಂದ್ರಕ್ಕೆ ತಿಳಿಸಬೇಕಿತ್ತು. ಆದರೆ ಮುಖ್ಯಮಂತ್ರಿಗಳು ಕಳೆದ ತಿಂಗಳು ಪತ್ರ ಬರೆದು ಯೂರಿಯಾ ರಸಗೊಬ್ಬರವು 6.30 ಲಕ್ಷ ಮೆಟ್ರಿಕ್ ಟನ್ ಅವಶ್ಯಕತೆ ಇದೆ ಎಂದು ತಿಳಿಸಿದ್ದಾರೆ ಎಂದು ಹೇಳಿದರು.

ಆದರೆ ಕೇಂದ್ರ ಸರ್ಕಾರ 8.73 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರವನ್ನು ಹೆಚ್ಚಿಗೆ ನೀಡಿದ್ದು, ಉಳಿದ 2.43 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರವನ್ನು ಕಾಳಸಂತೆಕೋರರಿಗೆ ಮಾರಾಟ ಮಾಡುವ ಹುನ್ನಾರದಿಂದ ರಸಗೊಬ್ಬರ ಅಭಾವವನ್ನು ಸೃಷ್ಟಿಮಾಡಿ, ಕಣ್ಣು ಕಿವಿ ಇಲ್ಲದ ಸರ್ಕಾರವಾಗಿದೆ ಎಂದು ದೂರಿದರು.

ಕಳೆದ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅನುಷ್ಠಾನಕ್ಕೆ ತರಲಾಗಿದ್ದ ರೈತರ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಿಸಲು 'ರೈತ ವಿದ್ಯಾನಿಧಿ', ರಾಜ್ಯದ 52 ಲಕ್ಷ ರೈತರಿಗೆ ಕಿಸಾನ್ ಸಮ್ಮಾನ್ ನಿಧಿಯಿಂದ ಪ್ರತೀ ರೈತರಿಗೆ 4 ಸಾವಿರ ರೂ ನಿಲ್ಲಿಸಲಾಗಿದೆ ಎಂದು ಲೇವಡಿ ಮಾಡಿದರು.

ರೈತರ ಕೃಷಿ ಪಂಪ್‌ಸೆಟ್‌ಗೆ ಟ್ರಾನ್ಸ್‌ಫಾರ್ಮರ್ ಅಳವಡಿಸಲು 25 ಸಾವಿರ ರೂ ನಿಗಧಿಪಡಿಸಲಾಗಿದ್ದು, ಇಂದಿನ ಕಾಂಗ್ರೆಸ್ ಸರ್ಕಾರ 3 ಲಕ್ಷ ರೂ ನೀಡಬೇಕು ಇದರ ಜೊತೆಗೆ ಒಂದು ಕಂಬಕ್ಕೆ 25 ಸಾವಿರ ರೂನಂತೆ ಹೆಚ್ಚುವರಿ ಹಣ ನೀಡಬೇಕಾಗಿದೆ ಎಂದ ಅವರು, ಮನೆಯ ವಿದ್ಯುತ್ ಬಿಲ್‌ನಲ್ಲಿ ಪ್ರತೀ ಯೂನಿಟ್‌ಗೆ 33 ಪೈಸೆಯಂತೆ ಇಪಿಪಿಸಿಎ ದರ ಹೊಸದಾಗಿ ಸೇರಿಸಲಾಗಿದೆ. ಮೊದಲಿದ್ದ ಸ್ಲಾಬ್ ಪದ್ಧತಿಯನ್ನು ರದ್ದುಮಾಡಿ ಪ್ರತೀ ಯೂನಿಟ್‌ಗೆ 5.78 ರೂ (4ನೇ ಪುಟಕ್ಕೆ)

ನೀರನ್ನು ವ್ಯರ್ಥ ಮಾಡದೇ ಮಿತವಾಗಿ ಶುಚಿಯಾಗಿ ತಪ್ಪದಂತೆ ಬಳಸಿ

ದಾವಣಗೆರೆ : ನೀರನ್ನು ಸುಖಾಸುಮ್ಮನೆ ವ್ಯರ್ಥವಾಗಿ ಪೋಲು ಮಾಡದೇ ಮಿತವಾಗಿ ತುಪ್ಪದ ರೀತಿಯಲ್ಲಿ ಬಳಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿನ ತುಂಗಭದ್ರಾ ಸಭಾಂಗಣದಲ್ಲಿ ಮಂಗಳವಾರ ಮಳೆನೀರು ಕೊಯ್ಲು ನಿರ್ವಹಣೆ ಕುರಿತು ಹಮ್ಮಿಕೊಂಡಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಭೂಮಿಯ ಮೇಲೆ ಶೇ.71ರಷ್ಟು ನೀರಿದ್ದರೂ ಬಳಕೆ ಮತ್ತು ಸೇವನೆಗೆ ಕೇವಲ ಶೇ.0.03ರಷ್ಟು ಮಾತ್ರ ಯೋಗ್ಯವಾಗಿದೆ. ನೀರು ಮೂಲಭೂತವಾಗಿ ಅತ್ಯಮೂಲ್ಯವಾದ ವಸ್ತು. ಆದ್ದರಿಂದ ನೀರನ್ನು ವ್ಯರ್ಥವಾಗಿ ಹರಿಯಲು ಬಿಡದೇ ಮಿತವಾಗಿ ಬಳಸಲು ಕ್ರಮವಹಿಸಬೇಕು. ರಾಜ್ಯವನ್ನು ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದ್ದಲ್ಲಿ ಅತ್ಯಂತ ನಿಕೃಷ್ಟ ಸ್ಥಿತಿಯಲ್ಲಿದೆ. ಇಡೀ ದೇಶದಲ್ಲಿಯೇ ನಮ್ಮ ರಾಜ್ಯವು 2ನೇ ಅತೀ ದೊಡ್ಡ ಮರುಭೂಮಿ ರಾಜ್ಯವಾಗಿದೆ. ಜಿಲ್ಲೆಯಲ್ಲಿ ವಾರ್ಷಿಕ 650 ಸೆ.ಮೀ ಮಳೆಯಾಗುತ್ತದೆ ಅಲ್ಲದೇ ಜಿಲ್ಲೆಗೆ ಹೊಂದಿಕೊಂಡು ತುಂಗಭದ್ರಾ ನದಿ ಹರಿಯುತ್ತಿದ್ದರೂ ಸಹ ಬೇಸಿಗೆಯಲ್ಲಿ ಕುಡಿಯುವ ನಿರಿಗೆ ತೊಂದರೆಯಾಗುತ್ತಿದೆ. ಆದುದ–ರಿಂದ ಸರ್ಕಾರಿ ಕಟ್ಟಡಗಳಿಗೆ, ಶಾಲಾ ಕಾಲೇಜು, ಹಾಸ್ಟೆಲ್‌ಗಳಿಗೆ ಮಳೆ ನೀರು ಕೊಯ್ಲು ಅಳವಡಿಸಬೇಕು. ಈ ಯೋಜನೆ ಅಳವಡಿಸಲು ಸ್ಥಳದ ಅಭಾವವಿದ್ದಲ್ಲಿ ಕೊಳವೆ ಬಾವಿ ಸುತ್ತಲೂ ಇಂಗು ಗುಂಡಿ ನಿರ್ಮಿಸಬೇಕು. ಹಾಗೆಯೇ ನಗರಸಭೆ, ಜಿಲ್ಲಾ ಪಂಚಾಯತಿ ಇನ್ನಿತರೆ ಸ್ಥಳೀಯ ಸಂಸ್ಥೆಗಳಿಂದ ಹೊಸದಾಗಿ ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡುವ ಮೊದಲು ಕಡ್ಡಾಯವಾಗಿ ಮಳೆನೀರು ಕೊಯ್ಲು ಅಳವಡಿಸಿಕೊಳ್ಳಲು ನಿರ್ದೇಶನ ನೀಡಬೇಕು. ಮಳೆ ನೀರು ಕೊಯ್ಲು ಅಳವಡಿಸಿಕೊಳ್ಳಲು ಒಪ್ಪಿಗೆ ನೀಡಿದವರಿಗೆ ಮಾತ್ರ ಅನುಮತಿ ನೀಡಬೇಕು ಎಂದು ತಾಕೀತು ಮಾಡಿದರು. ಅದಷ್ಟೇ ಅಲ್ಲದೇ ಪ್ರತಿಯೊಬ್ಬ ನಾಗರೀಕನೂ ತನ್ನ ಮನೆಗಳಿಗೂ ಯೋಜನೆಯನ್ನು ಅಳವಡಿಸಿಕೊಳ್ಳಬೇಕು ಎಂದ ಅವರು, ಈ ಮೂಲಕ ನೀರನ್ನು ಮಿತವಾಗಿ, ಶುಚಿಯಾಗಿ ಬಳಸಿದಲ್ಲಿ ಪರಿಸರಕ್ಕೆ ನೀಡುವ ಬಹುದೊಡ್ಡ ಕೊಡುಗೆ ಎಂದರು. ಇಂತಹ ಕಾರ್ಯಕ್ಕೆ ಕೇವಲ ಅಧಿಕಾರಿಗಳಷ್ಟೇ ಪಣತೊಟ್ಟರೆ ಸಾಲದು, ಸಮಾಜದಲ್ಲಿನ ಪ್ರತಿಯೊಬ್ಬ ನಾಗರೀಕನೂ ಸಹ ಕೈಜೋಡಿಸಿದಲ್ಲಿ ಯೋಜನೆಯೂ ಸಂಪೂರ್ಣವಾಗಿ ಯಶಸ್ವಿಯಾಗಲು ಸಾಧ್ಯ. ಇಂದಿನ ಈ ಕಾರ್ಯಕ್ರಮ ಭಾಷಣಕ್ಕೆ ಸೀಮಿತವಾಗದೇ ಮುಂದಿನ ದಿನಗಳಲ್ಲಿ ಅಭಿವೃದ್ಧಿ ಕಾರ್ಯಗಳ ಕುರಿತು ಮಾತನಾಡುವಂತಾಗಬೇಕು.

ಮೌಲ್ಯಯುತ ವಿಚಾರಗಳು ಮಾನವನ ಪ್ರಗತಿಗೆ ಪೂರಕ

ಗದಗ : ಮೌಲ್ಯಯುತ ವಿಚಾರಗಳು ಮಾನವನ ಪ್ರಗತಿಗೆ ಪೂರಕ ಎಂದು ಬಳಗಾನೂರು ಶಿವಶಾಂತವೀರ ಶರಣ–ರು ಹೇಳಿದರು.

ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ 30ನೇ ಪುಣ್ಯ ಸ್ಮರಣೋತ್ಸವದ ಅಂಗವಾಗಿ 1008 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಪರಮ ಪೂಜ್ಯಶ್ರೀ ಶಿವಶಾಂತವೀರ ಶರಣರ ತುಲಾಬಾರ ಹಾಗೂ ಉಚಿತ ನೇತ್ರಶಸ್ತ್ರ ಚಿಕಿತ್ಸಾ ಶಿಬಿರಕ್ಕೆ ಬಳ್ಳಾರಿಯ ಬಸವಭವನದಲ್ಲಿ ಭಾನುವಾರ ಚಾಲನೆ ನೀಡಿ ಅವರು ಆಶೀರ್ವಚನ ನೀಡಿ ಮಾತನಾಡಿ, ಮಹಾತ್ಮರು, ಶರಣರು, ಸಾಧುಗಳು ಮತ್ತು ಸಂತರ ಬದುಕಿನಲ್ಲಿ – ನುಡಿಗಳಲ್ಲಿ ಮೌಲ್ಯಗಳು – ಆದರ್ಶಗಳು ಮತ್ತು ಸಂಸ್ಕಾರಗಳು ಅಡಗಿರುತ್ತವೆ. ಮುಗ್ಧವಾದ ಭಕ್ತಿ, ಶ್ರದ್ಧೆಯ ಸ್ಮರಣೆ, ವಿಶ್ವಾಸಗಳಿಂದ ಮಹಾತ್ಮರನ್ನು – ಶರಣರನ್ನು ಸ್ಮರಿಸಿದಲ್ಲಿ ಬದುಕು ಸಾರ್ಥಕತೆಯನ್ನು ಪಡೆಯುತ್ತದೆ ಎಂದರು.

ಶರಣರು ಕಾಡು ಸೇರಿ ಸಾಧನೆ ಮಾಡಿದವರಲ್ಲ. ನಾಡಿನಲ್ಲಿ, ಜನರೊಂದಿಗೆ ಇದ್ದು ಸಾಧನೆಯನ್ನು ಮಾಡಿ ಸದ್ಗತಿಯನ್ನು ಸಾಧಿಸಿದವರು. ಗುರುವಿಗೆ ಶರಣಾದೊಡೆ ಸಾಧನೆ ಮತ್ತು ಯಶಸ್ಸು ಹಿಂಬಾಲಿಸುತ್ತವೆ. ಜೀವನದ ಸಾರ್ಥಕತೆಗೆ ಮಾನವೀಯತೆ, ಸೇವೆ, ತ್ಯಾಗ, ಕಾಯಕ ಅತಿ ಅಗತ್ಯ ಎಂದರು.

ಯರನಾಳ ಹಿರೇಮಠ ಸಂಸ್ಥಾನದ ಶಿವಪ್ರಸಾದ ದೇವರು ಅವರು, ತಾಯಿಯೇ ದೇವರು. ಭೂಮಿಗಿಂತಲೂ ದೊಡ್ಡದ್ದವರು ತಾಯಿ. ತಾಯಿಯ ಸೇವೆಯನ್ನು ಮಾಡುವುದು ಸಾಕ್ಷಾತ್ ದೇವರ ಸೇವೆಯನ್ನು ಮಾಡಿದಂತೆ. ಚಿಕೇನಕೊಪ್ಪದ ಚನ್ನವೀರ ಶರಣರು ಮಾತೆಯರನ್ನು ಗೌರವಿಸಲು – ಅಭಿನಂದಿಸಲಿಕ್ಕಾಗಿಯೇ ಉಡಿ ತುಂಬುವ ಕಾರ್ಯವನ್ನು ಪ್ರಾರಂಭಿಸಿದ್ದಾರೆ.

ಇಂದಿನ ದಿನಗಳಲ್ಲಿ ವಿದ್ಯೆ ಎಲ್ಲರಿಗೂ ಸಿಕ್ಕಿದ್ದು, ವಿನಯ ಮಾಯವಾಗಿದೆ. ವಿಜ್ಞಾನ ಅಭಿವೃದ್ಧಿ ಸಾಧಿಸಿದ್ದು ಅಜ್ಞಾನ ಪರಮಾವಧಿಯನ್ನು ತಲುಪಿದೆ. ಈ ನಿಟ್ಟಿನಲ್ಲಿ ಇಂದಿನ ಯುವಶಕ್ತಿಗೆ ವಿದ್ಯೆ, ವಿಜ್ಞಾನ, ವಿನಯ ಮತ್ತು ಪರಸ್ಪರರನ್ನು ಗೌರವಿಸುವ ಸಂಸ್ಕಾರವನ್ನು ಕಲಿಸಬೇಕಿದೆ ಎಂದರು.

ಮುಖ್ಯ ಅತಿಥಿಗಳಾಗಿದ್ದ ಅಲ್ಲಂ ವೀರಭದ್ರಪ್ಪ ಅವರು, ಚಿಕೇನಕೊಪ್ಪ ಚನ್ನವೀರ ಶರಣರು ನಡೆದಾಡುವ ದೇವರು. ಅವರ ತಪಸ್ಸಿನ ಸಾಧನೆ – ದೈವೀ ಶಕ್ತಿ ನಮ್ಮನ್ನೆಲ್ಲರನ್ನೂ ಇಲ್ಲಿ ಒಗ್ಗೂಡಿಸಿದೆ ಎಂದರು.

ಈಶ್ವರಿ ಮತ್ತು ತೇಜಸ್ವಿನಿ ಅವರು ಪ್ರಾರ್ಥನೆ ಸಲ್ಲಿಸಿದರು. ಪಂಡಿತ ಶಿವಲಿಂಗಶಾಸ್ತ್ರಿಗಳು ಸ್ವಾಗತ ಕೋರಿದರು. ಉಪನ್ಯಾಸಕ ಬಸವರಾಜ ಅಮಾತಿ ಅವರು ಪ್ರಾಸ್ತಾವಿಕ ಭಾಷಣ ಮಾಡಿದರು. ಶರಣ ಕುಮಾರ್ ಕೊತ್ತಲಚಿಂತ ಮತ್ತು ಸುಧಾಕರ ಅವರು ಸಂಗೀತ ಸೇವೆ ಸಲ್ಲಿಸಿದರು. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷರಾದ ಕೆ.ಬಿ. ಸಿದ್ದಲಿಂಗಪ್ಪ ಅವರು ಕಾರ್ಯಕ್ರಮ ನಿರೂಪಿಸಿದರು.

ಸಿದ್ದರಾಮಯ್ಯ ದೇಶ ಕಂಡ ಅತ್ಯಂತ ಶ್ರಮಜೀವಿ ಸಿಎಂ

ನಂದಿಬೆಟ್ಟ: ಸಿದ್ದರಾಮಯ್ಯ ಅತ್ಯಂತ ಶ್ರಮಶೀಲ ಮುಖ್ಯಮಂತ್ರಿ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸುವಲ್ಲಿ ಉತ್ಸುಕರಾಗಿರುವ ದೇಶದ ಅತ್ಯಂತ ಜನಪ್ರಿಯ ಮುಖ್ಯಮಂತ್ರಿಗಳಲ್ಲಿ ಒಬ್ಬರು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಹೇಳಿದ್ದಾರೆ.



ಸಂಪುಟ ಸಭೆಯ ನಂತರ ಸುದ್ದಿಗಾರರ ಜೊತೆ ಮಾತನಾಡಿದ ರಾಮಲಿಂಗಾ ರೆಡ್ಡಿ ನಂದಿ ಬೆಟ್ಟದಲ್ಲಿ ಸಂಪುಟ ಸಭೆ ನಡೆಸಲು ಸರ್ಕಾರ ನಿರ್ಧರಿಸಿರುವುದು ಮುಖ್ಯಮಂತ್ರಿ ರಾಜ್ಯದ ಎಲ್ಲಾ ಪ್ರದೇಶಗಳ ಅಭಿವೃದ್ಧಿಗೆ ಬದ್ಧವಾಗಿದೆ ಎಂದು ತೋರಿಸುತ್ತದೆ ಎಂದು ರೆಡ್ಡಿ ಹೇಳಿದರು.

ಎಐಸಿಸಿ ಪ್ರಧಾನ ಕಾರ್ಯದರ್ಶಿ ಮತ್ತು ಕರ್ನಾಟಕದ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಪಕ್ಷದ ಶಾಸಕರೊಂದಿಗೆ ಪ್ರತ್ಯೇಕವಾಗಿ ಸಭೆ ನಡೆಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಯಾವುದೇ ಸಚಿವರನ್ನು ಸಭೆಗೆ ಕರೆದಿಲ್ಲ ಎಂದು ಹೇಳಿದರು. ಅವಕಾಶ ನೀಡಿದರೆ, ಬೆಂಗಳೂರಿನಲ್ಲಿರುವ ಉನ್ನತ ನಾಯಕರನ್ನು ಭೇಟಿಯಾಗುವುದಾಗಿ ಹೇಳಿದರು.

ಕೆಲವು ಕಾಂಗ್ರೆಸ್ ಶಾಸಕರು ತಮ್ಮ ಅಸಮಾಧಾನವನ್ನು ಬಹಿರಂಗವಾಗಿ ವ್ಯಕ್ತಪಡಿಸಿದ ಬಗ್ಗೆ, ಪಕ್ಷದ ವ್ಯವಹಾರಗಳನ್ನು ಪಕ್ಷದ ನಾಲ್ಕು ಗೋಡೆಗಳ ಒಳಗೆ ಚರ್ಚಿಸಬೇಕು ಎಂದು ಸಚಿವರು ಹೇಳಿದರು. ಆದಾಗ್ಯೂ, ರಾಜ್ಯ ಕಾಂಗ್ರೆಸ್‌ನಲ್ಲಿ ಎಲ್ಲವೂ ಚೆನ್ನಾಗಿದೆ ಮತ್ತು ಹೈಕಮಾಂಡ್ ನಿರ್ಧಾರವು ಅಂತಿಮವಾಗಿದೆ ಎಂದು ಅವರು ಹೇಳಿದರು.

ಕೇಂದ್ರ ಸರ್ಕಾರದ ಯೋಜನೆಗಳ ಬಡವರ ಮನೆ ತಲುಪಿಸಿ: ಅಧಿಕಾರಿಗಳಿಗೆ ಹೆಚ್‌ಡಿಕೆ ಸೂಚನೆ

ಮೈಸೂರು: ಕೇಂದ್ರ ಸರ್ಕಾರದ ಎಲ್ಲಾ ಅನುದಾನಿತ ಅಭಿವೃದ್ಧಿ ಯೋಜನೆಗಳು ಬಡವರು, ನಿರ್ಗತಿಕರಿಗೆ ಪ್ರ

ಮಹಿಳಾ ಸಹಕಾರ ಬ್ಯಾಂಕ್‌ಗ್ರಾಹಕರಿಗೆ ಶೇ.12 ರಷ್ಟು ಡಿವಿಡೆಂಟ್‌ಘೋಷಣೆ : ಬಿ.ಸಿ. ಗೀತಾ

ಮಹಿಳಾ ಬ್ಯಾಂಕಿನ ವಾರ್ಷಿಕ ಮಹಾ ಸಭೆಯಲ್ಲಿ ಬ್ಯಾಂಕಿನಕ್ಯೂ.ಆರ್‌ಕೋಡ್ ಬಿಡುಗಡೆ

ಚಿಕ್ಕಮಗಳೂರು: ಕರ್ನಾಟಕ ಮಹಿಳಾ ಸಹಕಾರ ಬ್ಯಾಂಕ್ ಬ್ಯಾಂಕಿಂಗ್‌ಕ್ಷೇತ್ರದಲ್ಲಿಉತ್ತಮ ಸಾಧನೆ ಮಾಡಿದ್ದು, ಗ್ರಾಹಕರಿಗೆ ನಿರಾಶೆಯಾಗದಂತೆ ಬ್ಯಾಂಕಿನ ಲಾಭಾಂಶದಲ್ಲಿ ಶೆ.12 ರಷ್ಟುಡಿವಿಡೆಂಟ್ ನೀಡುವುದಾಗಿ ಬ್ಯಾಂಕಿನಅಧ್ಯಕ್ಷೆಕುಮಾರಿ ಬಿ.ಸಿ. ಗೀತಾಘೋಷಣೆ ಮಾಡಿದರು.

ಅವರುಇಂದು ಶ್ರೀ ರಂಗಣ್ಣನವರಕಲ್ಯಾಣ ಮಂಟಪದ ಸಭಾಂಗಣದಲ್ಲಿಏರ್ಪಡಿಸಲಾಗಿದ್ದ 26 ನೇ ವಾರ್ಷಿಕ ಮಹಾಸಭೆಯ ಕಾರ್ಯಕ್ರಮವನ್ನು ಉದ್ಘಾಟಿಸಿ, ಬ್ಯಾಂಕಿನಕ್ಯೂಆರ್‌ಕೋಡನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಯಾವುದೇ ವಂಚನೆ ಇಲ್ಲದೆ ಬ್ಯಾಂಕಿನ ಪ್ರಗತಿ ಸಾಗಬೇಕಾದರೆ ಆಡಳಿತ ಮಂಡಳಿಯ ಎಲ್ಲ ಸದಸ್ಯರ ಸಹಕಾರಅಗತ್ಯಎಂದಅವರು, ಕನ್ನಡದಲ್ಲಿ ವ್ಯವಹಾರ ಮಾಡುವುದರಜೊತೆಗೆತ್ವರಿತ ಸೇವೆ ಮಾಡುವಲ್ಲಿ ಬ್ಯಾಂಕಿನ ಸಿಬ್ಬಂದಿ ಗ್ರಾಹಕರಿಗೆಉತ್ತಮ ಸೇವೆ ನೀಡಿದಾಗ ಮಾತ್ರಯಶಸ್ಸುಕಾಣಲು ಸಾಧ್ಯಎಂದರು.

ಬ್ಯಾಂಕಿನ ವಹಿವಾಟುಅತ್ಯಂತತೃಪ್ತಿಕರವಾಗಿದೆ. ವಿಶೇಷವಾಗಿ ಇಂದುಕ್ಯೂಆರ್‌ಕೋಡ್ ಬಿಡುಗಡೆ ಮಾಡಿದ್ದು, ಇದರಿಂದ ಪ್ರತಿಯೊಬ್ಬಗ್ರಾಹಕರಿಗೂ ವ್ಯವಹಾರತಲುಪಬೇಕೆಂಬ ಉದ್ದೇಶ ಹೊಂದಲಾಗಿದೆಎಂದು ಹೇಳಿದರು.

ಬ್ಯಾಂಕಿನ ವರದಿ ಸಾಲಿನಲ್ಲಿರೂ 1773 ಕೋಟಿಗಳ ವ್ಯವಹಾರ ಮಾಡಿದ್ದು 313 ಕೋಟಿಗಳ ಠೇವಣಿ ಹೊಂದಲಾಗಿದೆ, ರೂ 208 ಕೋಟಿಹೊರಬಾಕಿ ಸಾಲ ಇರುತ್ತದೆ, ಬ್ಯಾಂಕಿನಲ್ಲಿ 7157 ಸದಸ್ಯರಿದ್ದು 22914 ಗ್ರಾಹಕರನ್ನು ಹೊಂದಿದ್ದುಒಟ್ಟುರೂ 5.57 ಕೋಟಿ ಲಾಭ ಗಳಿಸಿದೆ, ತೆರಿಗೆ ಪಾವತಿ ನಂತರರೂ 3.37 ಕೋಟಿ ನಿವ್ವಳ ಲಾಭ ಗಳಿಸಿರುತ್ತದೆ, ಈ ಸಾಲಿನಲ್ಲಿ ಶೇ 12% ಡಿವಿಡೆಂಟನ್ನು ನೀಡಲಾಗುವುದುಎಂದರು.

ನಗರದಎಲ್ಲಾ ಸಹಕಾರಿ ಬ್ಯಾಂಕ್‌ಗಳಿಗಿಂತ ವಿಭಿನ್ನವಾಗಿ ಸೇವೆ ಸಲ್ಲಿಸುತ್ತಿದ್ದು, ಎಲ್ಲಾರೀತಿಯಡಿಜಿಟಲ್ ಬ್ಯಾಂಕಿಂಗ್, ಎಟಿಎಂ, ಪಿಓಎಸ್, ಮೊಬೈಲ್ ಬ್ಯಾಂಕಿಂಗ್ ನೀಡಲಾಗಿದೆಇದಕ್ಕೆ ನಿಮ್ಮೆಲ್ಲರ ಸಹಕಾರ ಸಾಧನೆಗೆಕಾರಣವಾಗಿದ್ದು, ಶಿವಮೊಗ್ಗದಲ್ಲಿ ನಿವೇಶನ ಖರೀದಿಸಲಾಗಿದೆ. ಹಾಸನದಲ್ಲಿ ನೂತನ ಶಾಖೆ ಆರಂಭವಾಗಿದೆ. ವ್ಯವಹಾರಗಳು ಉತ್ತಮವಾಗಿ ನಡೆಯುತ್ತಿದ್ದು, ಈ ಮೂಲಕ ಬ್ಯಾಂಕಿನಗ್ರಾಹಕರಲ್ಲಿ ಹಂತ ಹಂತವಾಗಿ ನಂಬಿಕೆ ಮೂಡಿಸುತ್ತಿದ್ದೇವೆಂದು ತಿಳಿಸಿದರು.

ಮಹಿಳಾ ಬ್ಯಾಂಕಿನ 4 ಶಾಖೆಗಳಲ್ಲಿಯೂ ಗ್ರಾಹಕರನ್ನು ನಗುತ ಸ್ವಾಗತಿಸಿ ಸಂಯಮದಿಂದಅವರ ಕೆಲಸ ಕಾರ್ಯಗಳನ್ನು ಸಿಬ್ಬಂದಿ ಮಾಡುತ್ತಿದ್ದಾರೆಂದು ಶ್ಲಾಘಿಸಿದರು.

ಮುಂದಿನ ವರ್ಷ ಬೆಳ್ಳಿ ಹಬ್ಬಆಚರಣೆಜೊತೆಗೆ ಬ್ಯಾಂಕಿನ ಮೇಲಂತಸ್ತಿನ ಕಟ್ಟಡ ನಿರ್ಮಾಣಕ್ಕೆಗುರಿ ಹೊಂದಲಾಗಿದೆಎಂದರು.

ಈ ಸಂದರ್ಭದಲ್ಲಿಉಪಾಧ್ಯಕ್ಷೆ ಸುಧಾ ಹೆಚ್.ಆರ್‌ರಾಜು, ಸೌಭಾಗ್ಯಗೋಪಾಲನ್, ನಿರ್ದೇಶಕರುಗಳಾದ ಕಮಲಾಬಸವರಾಜ್, ಸೌಭಾಗ್ಯಗೋಪಾಲನ್, ಜಯಶ್ರೀನಂಜರಾಜ್, ಟಿ.ಪಿ ಜಯಲಕ್ಷ್ಮೀರಾಮೇಗೌಡ, ಬನಶಂಕರಿಜೋಷಿ, ತಾರಾಮೋಹನ್, ಕವಿತಾ.ಎಂ.ರಾಹುಲ್ ನಾಯಕ್, ಮೀನಾ.ಪಿ, ಆಶಾಹೇಮಂತ್‌ಕುಮಾರ್, ಸ್ಮಿತಾ ಬಿ.ಎಂ, ಸೌಜನ್ಯಕೆ.ಆರ್, ಅರುಂಧತಿ ಹೆಚ್.ಎಸ್, ಸುಮ.ಎಂ.ಸಿ, ಜನರಲ್ ಮ್ಯಾನೇಜರ್ ಸತೀಶ್, ವ್ಯವಸ್ಥಾಪಕರುಗಳಾದ ಕವಿತಾ, ಅಜಿತ್‌ಕುಮಾರ್, ಶ್ರೀರಾಮ್, ಅಭಿಜಿತ್, ಬ್ಯಾಂಕ್ ಸಿಬ್ಬಂದಿಗಳು ಹಾಗೂ ಸದಸ್ಯರುಗಳು ಉಪಸ್ಥಿತರಿದ್ದರು.

ಜಿಟಿ–ಜಿಟಿ ಮಳೆಯಿಂದಾಗಿ ಅಂಟಿದ ಕೊಳೆ ರೋಗ

ರೈತರಿಗೆ ಕಣ್ಣೀರು ತರಿಸಿದ ಈರುಳ್ಳಿ

ಜಗಳೂರಿನಲ್ಲಿ ಈರುಳ್ಳಿಗೆ ಕೊಳೆ ರೋಗ ಹರಡಿರುವುದು.

ಜಗಳೂರು: ಈರುಳ್ಳಿ ಬೆಳೆಗೆ ಕೊಳೆ ರೋಗ ದೊಡ್ಡ ಸಮಸ್ಯೆಯಾಗಿದ್ದು, ಬೆಳೆ ಸಂಪೂರ್ಣವಾಗಿ ನಾಶವಾಗುತ್ತಿದೆ. ಇದರಿಂದ ರೈತರು ಕಣ್ಣೀರು ಹಾಕುವ ಪರಿಸ್ಥಿತಿ ಬಂದಿದೆ. ಬೆಳೆಗಾರರು ಸಾಕಷ್ಟು ನಷ್ಟ ಅನುಭವಿಸುತ್ತಿದ್ದು, ಸಾಲದ ಸುಳಿಯಲ್ಲಿ ಸಿಲುಕುವಂತಾಗಿದೆ.

ಪ್ರತಿ ವರ್ಷ ಹೆಚ್ಚು ಈರುಳ್ಳಿ ಬೆಳೆಯುತ್ತಿದ್ದ ತಾಲೂಕಿನ ರೈತರು ಈ ಬಾರಿ 1150 ಎಕರೆ ಪ್ರದೇಶದಲ್ಲಿ ಮಾತ್ರ

ಬಿತ್ತನೆ ಮಾಡಿದ್ದಾರೆ. ಆದರೆ ಅತಿಯಾದ ಮಳೆಯಿಂದ ಕೊಳೆರೋಗ ವ್ಯಾಪಕವಾಗಿ ಹರಡುತ್ತಿದೆ. ವಿವಿಧ ಬೆಳೆಗಳನ್ನು ಬೆಳೆದು ಕೈ ಸುಟ್ಟುಕೊಂಡಿರುವ ರೈತರು ಆರ್ಥಿಕವಾಗಿ ಜರ್ಜರಿತರಾಗಿದ್ದಾರೆ. ಕೆಲ ದಿನಗಳಿಂದ ತಾಲೂಕಿನ ಬಹುತೇಕ ಕಡೆ ಜಿಟಿ ಜಿಟಿ ಮಳೆ ಸುರಿಯುತ್ತಿದ್ದು, ಈರುಳ್ಳಿ ರೈತರ ಕೈಗೆಟುಕದಂತಾಗಿದೆ. ಕಂಗಾಲಾದ ಬೆಳೆಗಾರರು: ತಾಲೂಕಿನ ಜಮ್ಮಾ ಪುರ, ತೋರಣಗಟ್ಟೆ, ದೊಣೆಗಳ್ಳಿ, ಬಿದರಕೆರೆ, ಕ್ಯಾಸೇನಹಳ್ಳಿ, ಕಲ್ಲೇದೇವರಪುರ ವ್ಯಾಪ್ತಿಯಲ್ಲಿ ಬೆಳೆ ಒಕ್ಕಣೆ ಸಮೀಪಿಸುತ್ತಿವಂತೆ ಕೊಳೆ ರೋಗ

ರೈತರ ಸಂತಸವನ್ನು ಕಸಿದಿದೆ. ಅಲ್ಲದೇ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸೂಚಿಸಿದ ಔಷಧೋಪಚಾರಕ್ಕೂ ರೋಗ ನಿಯಂತ್ರಣವಾಗಿಲ್ಲ.

ಬೆಳೆಗೆ ಹೂಡಿದ ಬಂಡವಾಳವೂ ಬರಲಿಲ್ಲ. ಬೆಳೆಯೂ ಕೈಗೆ ಸಿಗಲಿಲ್ಲ ಎಂಬಂತಾಗಿದೆ. ಹೀಗಾಗಿ ರೈತರು ಬೆಳೆ ನಾಕಪಡಿಸಿ ಪರ್ಯಾಯ ಬೆಳೆಗಾಗಿ ಜಮೀನನ್ನು ಹದ ಮಾಡಿಕೊಳ್ಳುತ್ತಿದ್ದಾರೆ. ಮತ್ತೊಂದೆಡೆ ನಾಶಪಡಿಸಿದ ಈರುಳ್ಳಿ ಬೆಳೆಗೆ ಸರ್ಕಾರ ಪರಿಹಾರ ನೀಡಿ ನಮ್ಮ ಸಂಕಷ್ಟಕ್ಕೆ ಸ್ಪಂದಿಸಲಿ ಎಂಬುದು ರೈತರ ಆಗ್ರಹವಾಗಿದೆ.

ಮುಸ್ಟೂರಲ್ಲಿ ಚಿರತೆ ಪ್ರತ್ಯಕ್ಷ

ಜಗಳೂರು: ತಾಲೂಕಿನ ಮುನ್ನೂರು ಗ್ರಾಮದ ಮೆಕ್ಕೆಜೋಳದ ಜಮೀನಿನಲ್ಲಿ ಚಿರತೆ ಪ್ರತ್ಯಕ್ಷವಾಗಿದ್ದು, ರೈತರು ಭಯ ಭೀತರಾಗಿದ್ದಾರೆ. ಮುಸ್ಟೂರು ಮತ್ತು ನಾಯಕನಹಟ್ಟಿ ಸಂಪರ್ಕಿಸುವ ರಸ್ತೆಯಲ್ಲಿ ಬುಧವಾರ ರಾತ್ರಿ ಮದ್ಯದಂಗಡಿಯೊಂದಕ್ಕೆ ಅಳವಡಿಸಲಾಗಿರುವ ಸಿಸಿ ಕ್ಯಾಮೆರಾದಲ್ಲಿ ಚಿರತೆ ಗ್ರಾಮಸ್ಥರು ಚಿರತೆ ಓಡಾಡುತ್ತಿದ್ದು, ಓಡಾಡಿದ ದೃಶ್ಯ ಕಂಡಿದೆ ರೈತ ಪೂಜಾರ್ ಅಜಯ್ ಮೆಕ್ಕೆಜೋಳದ ಹೊಲದಲ್ಲಿ ಪ್ರತ್ಯಕ್ಷವಾಗಿ ವೀಕ್ಷಿಸಿದ್ದಾರೆ ಚಿರತೆ ನೋಡಿದ ಅಜಯ್ ಗ್ರಾಮಸ್ಥರಿಗೆ ತಿಳಿಸಿದ್ದಾರೆ. ಗ್ರಾಮಸ್ಥರು ಭಯಭೀತರಾಗಿದ್ದು, ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು ಎಂದು ಕೋರಿದ್ದಾರೆ

ನಾಮನಿರ್ದೇಶನಕ್ಕಾಗಿ ಅರ್ಜಿ ಆಹ್ವಾನ

ದಾವಣಗೆರೆ : ಹೊನ್ನಾಳಿ ಉಪವಿಭಾಗ ಮಟ್ಟದ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಜಾಗೃತಿ ಮತ್ತು ಉಸ್ತುವಾರಿ ಸಮಿತಿಗೆ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸಾಮಾಜಿಕ ಸೇವೆಯನ್ನು ಸಲ್ಲಿಸುತ್ತಿರುವ ಇಬ್ಬರು ಪರಿಶಿಷ್ಟ ಜಾತಿಯ ಸದಸ್ಯರನ್ನು ನಾಮನಿರ್ದೇಶನ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಸೆಪ್ಟೆಂಬರ್ 8 ಒಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಹಿತಿಗಾಗಿ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಹೊನ್ನಾಳಿ ಇವರನ್ನು ಸಂಪರ್ಕಿಸಲು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

ರೆಡ್‌ಕ್ರಾಸ್ ಸಂಸ್ಥೆಗೆ 11 ಸ್ಥಾನಗಳಿಗೆ ನಾಮನಿರ್ದೇಶನ, 10 ಸ್ಥಾನಗಳಿಗೆ ಚುನಾವಣೆ

ದಾವಣಗೆರೆ : ದಾವಣಗೆರೆ ಘಟಕದ ಭಾರತೀಯ ರೆಡ್ ಕ್ರಾಸ್ ಸೊಸೈಟಿ ಆಡಳಿತ ಮಂಡಳಿಯ ನಿರ್ದೇಶಕರ 15 ಸ್ಥಾನಗಳ ಪೈಕಿ 8 ಸ್ಥಾನಗಳನ್ನು ಚುನಾವಣೆ ಮೂಲಕ ಆಯ್ಕೆ ಮಾಡುವ ಆದೇಶವನ್ನು ವಾಪಸ್ ಬೈಲಾ ಪ್ರಕಾರ ಪಡೆದು 11 ಸ್ಥಾನಗಳಿಗೆ ನಾಮನಿರ್ದೇಶನ ಮತ್ತು 10 ಸ್ಥಾನಗಳಿಗೆ ಚುನಾವಣೆ ನಡೆಸಲು ಜಿಲ್ಲಾಧಿಕಾರಿ ಹಾಗೂ ರೆಡ್ ಕ್ರಾಸ್ ಸೊಸೈಟಿ ಅಧ್ಯಕ್ಷರಾದ ಗಂಗಾಧರಸ್ವಾಮಿ ಜಿ.ಎಂ. ಆದೇಶಿಸಿದ್ದಾರೆ.

ಪ.ಜಾತಿ ಮತ್ತು ಪ.ಪಂಗಡದ ಫಲಾನುಭವಿಗಳಿಂದ ಅರ್ಜಿ ಆಹ್ವಾನ

ದಾವಣಗೆರೆ: ಪ್ರಸಕ್ತ ಸಾಲಿನ ಮೀನುಗಾರಿಕೆ ಇಲಾಖೆ ವತಿಯಿಂದ ರಾಜ್ಯವಲಯ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳ ಯೋಜನೆಗಳಿಗೆ ನೆರವು ನೀಡಲು ಅರ್ಜಿ ಆಹ್ವಾನಿಸಲಾಗಿದೆ.ಮೀನುಗಾರರಿಗೆ ನಾಲ್ಕು ಚಕ್ರ ವಾಹನ ಖರೀದಿಸಲು ಶೇ.50ರಷ್ಟು ಅಥವಾ ಗರಿಷ್ಠ ರೂ.3 ಲಕ್ಷ ಆರ್ಥಿಕ ನೆರವು ನೀಡಲಾಗುವುದು. ಜಿಲ್ಲೆಗೆ ಪ.ಜಾತಿ–2 ಮತ್ತು ಪ.ಪಂಗಡ–1 ಗುರಿ ನಿಗದಿಪಡಿಸಲಾಗಿದೆ. ಅರ್ಜಿಯನ್ನು ಸೆಪ್ಟೆಂಬರ್ 10 ರೊಳಗಾಗಿ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಸಬೇಕೆಂದು ಮೀನುಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವೀಸಿಂಗ್ ತರಬೇತಿ

ದಾವಣಗೆರೆ : ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಸೆಪ್ಟೆಂಬರ್ ನಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರಿಗೆ ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವೀಸಿಂಗ್ ತರಬೇತಿ ಶಿಬಿರವನ್ನು ಏರ್ಪಡಿಸಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಸೆ.8 ರಂದು ಬೆಳಗ್ಗೆ 9 ಗಂಟೆಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ, ಸೊಣ್ಣಹಳ್ಳಿಪುರ, ಹಸಿಗಾಳ(ಅಂಚೆ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಡೆಯುವ ತರಬೇತಿಗೆ ನೇರವಾಗಿ ವಿದ್ಯಾರ್ಹತೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯನ್ನು ದೂ.ಸಂಖ್ಯೆ 8970476050, 9591514154, 9686248369, 8970446644, 9505894247 ಗಳಿಗೆ ಸಂಪರ್ಕಿಸಬಹುದೆಂದು ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ.

ನಾಗಪುರ ದೀಕ್ಷಾ ಭೂಮಿಗೆ ತೆರಳುವ ಯಾತ್ರಾರ್ಥಿಗಳಿಗೆ ಸಾರಿಗೆ ಸೌಲಭ್ಯ

ದಾವಣಗೆರೆ : ಪ್ರಸಕ್ತ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳು ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ಬಸ್ಸು ಹಾಗೂ ರೈಲಿನ ವ್ಯವಸ್ಥೆ ಕಲ್ಪಿಸಲಾಗುವುದು.

ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್ ಸೈಟ್ https://swd.karnataka.gov.in ನಲ್ಲಿ ಆನ್‌ಲೈನ್ ಮೂಲಕ ಆ.25 ರಿಂದ ಸೆ.9 ರೊಳಗಾಗಿ ನೊಂದಾಯಿಸಿಕೊಳ್ಳಲು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ನಾಗರಾಜ್ ತಿಳಿಸಿದ್ದಾರೆ.

ಭಕ್ತನಾದರೆ ಭೃತ್ಯಾಚಾರದ ಅರಿವು ಇರಬೇಕು

ಗದಗ: ಭೃತ್ಯಾಚಾರ(ಸೇವಾಭಾವ)ವಿಲ್ಲದ ಸತ್ಯ ಸದಾಚಾರಕ್ಕೆ ಸಲ್ಲದ ಹೆಸರು ಭಕ್ತರು ವೇಶಭೂಷಣಗಳಿಂದ ಹತ್ತಿ ಹಣ್ಣಿನ ಭಕ್ತಿ ಒಳಗೆ ಹುಳು ಮೇಲೆ ಸಾತ್ವಿಕ ಬಣ್ಣಜ ಕವಚ ಇಂತಿರುವವರು ಭಕ್ತರಾಗಬಲ್ಲರೇ? ಹೀಗೆಂದು ಶರಣೆ ನೀಲಮ್ಮತಾಯಿಯವರು ಶರಣಚರಿತಾಮೃತ ಪ್ರವಚನದಲ್ಲಿ ಬಸವಣ್ಣನವರ ಹಾಗೂ ಅಲ್ಲಮ ಪ್ರಭುಗಳ ಮಧ್ಯದಲ್ಲಿ ನಡೆದಿವರ ಸಂವಾದವನ್ನು ಶಿವಶರಣೆ ನೀಲಮ್ಮತಾಯಿಯವರುಅರ್ಥಪೂರ್ಣವಾಗಿ ವಿವರಿಸಿದರು.

ಶ್ರಾವಣ ಮಾಸದ ಅಂಗವಾಗಿ, ಶ್ರಾವಣ ಮಾಸದಲ್ಲಿಒಂದು ತಿಂಗಳು ನಡೆಯುವಜ್ಞಾನದಾಸೋಹದಲ್ಲಿ ಭಾಗವಹಿಸಿ ಮಾತನಡುತ್ತಾ ಭಕ್ತನಾದರೆಕಾಯದಲ್ಲಿ ಭಕ್ತಿಇರಬೇಕು. ಗೋಸಂಬಿಯಂತೆ ಭಕ್ತಿಒಂದುರೀತಿ ವರ್ತಿಸುವುದಲ್ಲ. ಭಕ್ತಿಗೆ ಬಣ್ಣವಿಲ್ಲ. ಸತ್ಯಕ್ಕೆಯಾವುದೇ ಲೇಪನವಿಲ್ಲ. ಸತ್ಯಯಾವಾಗಲೂಒಂದೇ. ಸುಳ್ಳಿಗೆ ಸುಳ್ಳು ಸಾವಿರಾರು ಸುಳ್ಳು ಜೋಡಿಸಿ ಹೇಳಲು ಬರುತ್ತೇ. ಆದರೆ ಸತ್ಯಕ್ಕೆ ಹೇಳಲು ಬರುವುದಿಲ್ಲಾ. ಅಹಂ ನ ಬಕ್ತಿಯ ಸಂಭ್ರಮಕ್ಕೆ ಸತ್ಯ ಸ್ಥಿತಿ ಸಮನ್ವಿಸುವುದಿಲ್ಲಾ. ಭಕ್ತಿಯನ್ನು ಮಾತಿನಲ್ಲಿ ನುಡಿದು ಮಲಗಿಸಿದರೆ ಹೇಗೆ ? ಬೆಳೆಯುವ ಭೂಮಿಯಲ್ಲಿ ಪ್ರಳಯದ ಕಸ ಹುಟ್ಟಿದಂತೆ ಭಕ್ತಿಯೊಂದಿಗೆ ಅಹಂ ನ ಕಸ ಬೆಳೆಯಬಾರದು. ವಿಷಗುಂಬಳ ಕಾಯಿ ಹಣ್ಣಾದಂತೆಭಕ್ತಿಯಾಗಬಾರದು.

ಬೆಟ್ಟಕ್ಕೆ ಭಳಿಯಾದರೆ ಏನು ಹೊದಿಸಬೇಕು ಭಯಲು ಬತ್ತಲೆಆದರೆಏನನ್ನುಉಡಿಸಬೇಕು ಭಕ್ತನು ಭವಿ ಆದರೆಅದೆನನುಪಮಿಸುವೆನಂ ಸ್ಯಗುಹೇಶ್ವರ ಹೀಗೆಂದುಅಲ್ಲಮ ಪ್ರಭುಗಳು ಬಸವಣ್ಣನವರಿಗೆ ಪ್ರಶ್ನಿಸುತ್ತಾರೆ. ಬರಿದೆ ಭಕ್ತರಾದೇವೆಂದು ಬೆಚ್ಚನೆ ಬೆರೆಯುವ ಹೇಡಿಂಗೆ ನಾನು ಮರಗುವೆಕಾಣಾಗುಹೇಶ್ವರಎಂದು ಪ್ರಭುದೇವರ ಬಸವಣ್ಣನವರ ಪ್ರಶ್ನೋತ್ತರ ವಿಷಯವನ್ನುತಾಯಿಯವರು ಬಹು ಮಾರ್ಮಿಕವಾಗಿ ಪ್ರವಚನ ನೀಡಿದರು. ಆಧ್ಯಾತ್ಮ ವಿದ್ಯಾಶ್ರಮದ ಸಹೋದರಿಯರು ಶ್ರೀ ಲಲಿತಾ ಸಹಸ್ರನಾಮಾಸ್ತೋತ್ರವನ್ನು ನಡೆಸಿಕೊಟ್ಟವರು.

ನಾಡಿನ ಕೆಲವೇ ಕೆಲವು ಪ್ರವಚನಕಾರರಲ್ಲಿ ನೀಲಮ್ಮತಾಯಿಯವರುಒಬ್ಬರು.

ಮಹಿಳೆಯರು ಸನ್ಯಾಸಿಯಾಗುವುದು ಬಹಳ ಕಷ್ಟದ ಕೆಲಸ. ಅಂಥದರಲ್ಲಿ ನೀಲವ ಮ್ಮತಾಯಿಯವರುತಮ್ಮಜೀವನವನ್ನೇ ಸಮಾಜಕ್ಕೆ ಅರ್ಪಿಸಿರುವರು.

ಇದೇತಾರೀಖು 24 ರವಿವಾರದಂದು ಗದಗತೋಂಟದಾರ್ಯಕಲ್ಯಾಣಕೇಂದ್ರದಲ್ಲಿಜಿಲ್ಲಾ ಮಟ್ಟದ ಶರಣ ಮೇಳ ನಡೆಯಲಿದ್ದು, ಬೆಳಿಗ್ಗೆ 8:30 ರಿಂದ ಸಾಯಂಕಾಲ 6:00ಗಂಟೆ ವರೆಗೆ ನಡೆಯಲಿದ್ದು, ಈ ಕಾರ್ಯಕ್ರಮದಲ್ಲಿಒಕ್ಕಲಗೇರಿಓಣಿಯ ಸರ್ವ ಸದಸ್ಯರು ಭಾಗವಹಿಸಬೇಕೆಂದು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿಟ್ರಸ್ಟ್‌ಕಮೀಟಿಯ ಸದಸ್ಯರಾದಕೊಟ್ರಪ್ಪಕಮತರ, ಎಂ.ಎಂ. ಹಿರೇಮಠ ವಕೀಲರು, ಶಿವಣ್ಣ ಕತ್ತಿ, ಮುರಿಗೆಪ್ಪ ನಾಲವಾಡ, ಹಿರಿಯರಾದವಿರುಪಾಕ್ಷಪ್ಪ ಅಕ್ಕಿ, ಬಸವರಾಜಜಂಪ್ಲಿ, ಬಸವರಾಜ ಮಡಿವಾಳರ,

ಪುರಾಣ ಪ್ರವಚನ ಸಮಿತಿಅಧ್ಯಕ್ಷರಾದ ಶೇಖಪ್ಪ ಹೊಂಬಳ, ಸಿದ್ದಣ್ಣ ಅರಳಿ, ಗಂಗಾಧರ ಮೇಲಗಿರಿ, ಗಂಗಾಧರ ನಂದಿಕೋಲಮಠ, ಶ್ರಿಶೈಲಪ್ಪ ಪಟ್ಟಣಶೆಟ್ಟಿ, ಸುರೇಶ ಮಾಳವಾಡ, ಪ್ರಭು ಶೆಟ್ಟರ, ಸುಭಾಸ ಹವಳೆ, ವಿರುಪಾಕ್ಷಪ್ಪಅಂಗಡಿ, ಮಲ್ಲಿಕಾರ್ಜುನ

ಹಿರೇಮಠ,ಶಂಕರ ನೀರಲಕೇರಿ, ಸುರೇಶ ನಿಲುಗಲ್ಲ, ಅಶೋಕ ತಮ್ಮಳ್ಳಿ, ಬಸವರಾಜ ಮೊರಬದ, ಶರಣಮ್ಮ ಶಿರೂರ, ಸುಶೀಲಾ ನಿಲೂಗಲ್ಲ, ನೀಲಕ್ಕ ಕಗನಳ್ಳಿ, ಅನಸಕ್ಕ ಮೇಲಗಿರಿ, ಶೈಲಾ ಮಾನ್ವಿ, ಸರಸ್ವತಿ ನಂದಿಕೋಲಮಠ ಮುತಾದವರು ಭಾಗವಹಿಸಿದ್ದರು.

ಪ್ಲಾಸ್ಟಿಕ್ ಮಾರಾಟ ಮಾಡುತ್ತಿದ್ದ ವರ್ತಕರಿಂದ 15 ಸಾವಿರರೂದಂಡ ವಸೂಲಿ : ಶೀಲಾದಿನೇಶ್

ಚಿಕ್ಕಮಗಳೂರು: ಪ್ಲಾಸ್ಟಿಕ್ ಮುಕ್ತ ನಗರವನ್ನಾಗಿಸಲು ನಗರಸಭೆಗುರಿ ಹೊಂದಿದ್ದು, ಅದರಂತೆಅಧಿಕಾರಿ ಸಿಬ್ಬಂದಿಗಳು ಉತ್ತಮ ಕೆಲಸ ಮಾಡುತ್ತಿದ್ದು, ನಗರದ ವಿವಿಧ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಮಾರಾಟ ಮಾಡುತ್ತಿದ್ದ ವರ್ತಕರಿಂದ ಸುಮಾರು 15 ಸಾವಿರರೂದಂಡ ವಸೂಲಿ ಮಾಡಲಾಗಿದೆಎಂದು ನಗರಸಭಾಧ್ಯಕ್ಷೆ ಶೀಲಾದಿನೇಶ್ ತಿಳಿಸಿದರು.

ಬಸವ ತತ್ವ ಜಂಗಮವಾಗದೆ ಒಂದೆಡೆ ನಿಲ್ಲುವ ಹಂತ ತಲುಪುತ್ತಿದೆ : ಸಾಣೆಹಳ್ಳಿ ಶ್ರೀಗಳು

ಕಡೂರು: ಬಸವ ತತ್ವ ಜಂಗಮವಾಗದೆ ಒಂದೆಡೆ ನಿಲ್ಲುವ ಹಂತ ತಲುಪುತ್ತಿದೆ ಬಸವ ತತ್ವಗಳನ್ನು ಮತ್ತೆ ಬಿತ್ತುವ ಕಾರ್ಯವಾಗಬೇಕು, ಮಾಡುವ ಕೆಲಸವನ್ನು ಕಾಯಕ ಎಂದು ಭಾವಿಸಿದಾಗ ಯಶಸ್ವಿಯಾಗುವುದು, ಬಸವ ತತ್ವ ಹರಡುವ ಕಾರ್ಯಕ್ರಮಗಳಿಗೆ ಕೊರತೆ ಇಲ್ಲ, ಹೆಗ್ಗಳಿಕೆಯ ಕಾರ್ಯಕ್ರಮಗಳಾಗುತ್ತಿವೆ, ಆದರೆ

ಅದರಿಂದ ಮೂಲ ತತ್ವ ತಿಳಿಸುವ ಕೆಲಸ ಆಗುತ್ತಿದೆ ಎಂದು ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ, ಶರಣರ ವಚನಗಳ ಆದೇಶದಂತೆ ಪ್ರತಿಯೊಬ್ಬರೂ ಬದುಕಬೇಕು ಎಂದು ತರಳಬಾಳು ಮಠದ ಸಾಣೆಹಳ್ಳಿಯ ಶ್ರೀ ಡಾ. ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ತಿಳಿಸಿದರು.

ತಾಲೂಕು ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಕಡೂರು ಕಸಬಾ ಹೋಬಳಿ ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ ಶ್ರಾವಣ ಸಂಜೆ ಶರಣರ ಸಂದೇಶ ಸಮಾರೋಪ ಸಮಾರಂಭವು ಜಿ ತಿಮ್ಮಾಪುರ ಗ್ರಾಮದಲ್ಲಿ ಜರುಗಿತು, ಸಮಾರಂಭದ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದ ಶ್ರೀಗಳು ಜನರಲ್ಲಿ ಅರಿವಿನ ಜಾಗೃತಿ ಮೂಡಿಸಬೇಕು, ಮುಕ್ತವಾಗಿ

ವ್ಯಕ್ತಿಗತವಾಗಿ ಬದಲಾವಣೆಯಾಗಬೇಕು, ರಸ್ತೆಗಳು ವಾಹನಗಳು ಬದಲಾಗುತ್ತಿವೆ, ಬದುಕು ಮಾತ್ರ ಕತ್ತಲೆಯ ಕಡೆ ಹೋಗುತ್ತಿದೆ, ಬೆಳಕಿನಿಂದ ಮಹಾ ಬೆಳಕಿನ ಕಡೆಗೆ ಹೋಗಲು ಪ್ರಯತ್ನ ಪಡಬೇಕು, ಬಸವ ತತ್ವದ ಅರಿವಿಲ್ಲದೆ

ನಡೆ ನುಡಿ ಒಂದಾಗುತ್ತಿಲ್ಲ, ಪರಧನ, ಪರಸ್ತ್ರೀ ವ್ಯಾಮೋಹದಿಂದ ಅನೇಕರು ಜೈಲಿನಲ್ಲಿದ್ದಾರೆ, ಮಹಿಳೆಯರು ಮಕ್ಕಳಿಗೆ ಸಂಸ್ಕಾರವನ್ನು ಕೊಡುವ ಕೆಲಸ ಆಗಬೇಕಿದೆ ಎಂದರು.

ಮಾಜಿ ಶಾಸಕರಾದ ವೈ.ಎಸ್.ವಿ. ದತ್ತಾರವರು ಸಮಾರಂಭದಲ್ಲಿ ಉಪನ್ಯಾಸ ನೀಡಿ ಮಾತನಾಡಿ 12ನೇ ಶತಮಾನದಲ್ಲೇ ಬಸವಣ್ಣನವರು ಕಲ್ಯಾಣದ ಕನಸು ಕಂಡಿದ್ದರು, ಯುವಜನತೆ ಅವನತಿಯ ಕಡೆಗೆ ಹೋಗುತ್ತಿದೆ ಮತ್ತೆ ಕಲ್ಯಾಣದ ಕಡೆ ಹೋಗುವ ಅನಿವಾರ್ಯತೆ ಇದೆ, 12ನೆಯ ಶತಮಾನದಲ್ಲಿ ಮೌಢ್ಯತೆ ಮೂಡನಂಬಿಕೆ ಅಂದ ಶ್ರದ್ಧೆಯ ವಿರುದ್ಧ ಹೋರಾಡಿ ಕಲ್ಲು ದೇವರ ಪೂಜೆ ಅಜ್ಞಾನವನ್ನು ಮೂಡಿಸುವುದರ ವಿರುದ್ಧ ಆಕ್ರೋಶಗೊಳ್ಳುತ್ತಿದ್ದರು, ಜನರನ್ನು ಜಾಗೃತಿಗೊಳಿಸಲು ಮೌಢ್ಯತೆ ಹಿಂದೆ ಹೋಗಬಾರದು ಎಂದು ಬಸವಣ್ಣನವರು ಸಾರಿದರು ಎಂದರು.

ಮೌಢ್ಯತೆಯು ಅಮಾಯಕರನ್ನು ಹಾಳು ಮಾಡುತ್ತದೆ ಎಂದು ಅಂಬೇಡ್ಕರ್ ಅವರ ಸಂವಿಧಾನ ಹೇಳುತ್ತದೆ, ಅನುಭವ ಮಂಟಪದಂತಹ ಪಾರ್ಲಿಮೆಂಟ್ ಇಂದಿನ ಅಗತ್ಯ, ಇತ್ತೀಚಿನ ದಿನಗಳಲ್ಲಿ ಆಳುವ ಅರಸರ ದಾಸರಾಗುತ್ತಿದ್ದೇವೆ, ಬಸವಣ್ಣನವರ ಮಹಾ ಮನೆಯ ಪರಿಕಲ್ಪನೆ ಅದ್ಭುತವಾದದ್ದು, ಆತ್ಮವಿಶ್ವಾಸ ಸ್ವಾಭಿಮಾನ ಅಂಬೇಡ್ಕರ್ ಆಶಯ ಪ್ರಜಾಪ್ರಭುತ್ವದ ಬಯಲು ರಾಜಕಾರಣಿಗಳಿಗೆ ಅಲ್ಲಮನ ಸಂದೇಶ, ಆರ್ಥಿಕ ಅಸಮಾನತೆ ಜಾತಿ ವ್ಯಾಮೋಹ ಹೆಚ್ಚಾಗುತ್ತಿದೆ,, ಧಾರ್ಮಿಕ ಅತಿರೇಕ, ಬಡವ, ಶ್ರೀಮಂತ ಅಂತರ ಹೆಚ್ಚಾಗುತ್ತಿದೆ, ಮೌಢ್ಯತೆಯು ಹೆಚ್ಚಾಗುತ್ತಿದೆ, ಇದಕ್ಕಾ-ಗಿಯೇ ಮತ್ತೆ ಕಲ್ಯಾಣದ ಬಸವಣ್ಣ ಬೇಕಾಗಲಿದ್ದಾರೆ ಎಂದರು.

ಸಮಾರಂಭದ ಸಾನಿಧ್ಯವನ್ನು ಯಳನಡು ಮಠದ ಶ್ರೀ ಜ್ಞಾನ ಪ್ರಭು ಸಿದ್ಧರಾಮದೇಶಿ ಕೇಂದ್ರ ಸ್ವಾಮಿಗಳು ವಹಿಸಿದ್ದರು, ಡಾ ಸಿ ಸೋಮಶೇಖರ್ ಸಮಾರೋಪ ಭಾಷಣ, ಪ್ರಾಸ್ತಾವಿಕವಾಗಿ ಕೆ. ವಿರುಪಾಕ್ಷಪ್ಪ ಮಾತನಾಡಿದರು, ಸಮಾರಂಭದಲ್ಲಿ ಎಂ. ಮರಳುಸಿದ್ದಪ್ಪ, ಕುಮಾರಿ ವಿದ್ಯಾದರೆ, ದೇವಾನಂದ್, ಎಮ್ ರಂಗಪ್ಪ, ಬಸವರಾಜಪ್ಪ, ಗಂಗಾಧರ ಶಿವಪುರ, ಜಿ.ಟಿ ನಾಗರಾಜ್, ವಕೀಲ ಬೊಮ್ಮಣ್ಣ, ಬಸವರಾಜ್ ನೆಲ್ಲಿಸರ, ಯಗಟಿ ಸತೀಶ್, ಎ.ಜೆ. ಪ್ರಕಾಶ್ ಮೂರ್ತಿ, ಜಿ.ಟಿ.ರಾಜಶೇಖರ್, ಪ್ರಜ್ಞಾಶಾಲೆಯ ಮಂಜುನಾಥ್ ಪ್ರಸನ್ನ ಮತ್ತಿತರರು ಇದ್ದರು.

ಬೆಂಗಳೂರು: ಷೇರು ಮಾರುಕಟ್ಟೆಯಲ್ಲಿ ಲಾಭಗಳಿಕೆ ಆಮೀಷವೊಡ್ಡಿ ಕುಟುಂಬಕ್ಕೆ 4.25 ಕೋಟಿ ರೂ. ವಂಚನೆ!

ಬೆಂಗಳೂರು: ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿದರೆ ಭಾರಿ ಲಾಭಗಳಿಸಬಹುದೆಂಬ ಆಮಿಷವೊಡ್ಡಿ ಕುಟುಂಬವೊಂದಕ್ಕೆ 4.25 ಕೋಟಿ ರೂ.ವಂಚಿಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಕುಟುಂಬದ ಸ್ನೇಹಿತರೊಬ್ಬರು ಶೇ. 35 ರಷ್ಟು ಲಾಭದ ಆಸೆ ತೋರಿಸಿ 48 ವರ್ಷದ ವ್ಯಕ್ತಿ ಮತ್ತು ಅವರ ಕುಟುಂಬಕ್ಕೆ ಷೇರು ಮಾರುಕಟ್ಟೆಯಲ್ಲಿ ಹಣ ಹೂಡುವಂತೆ ಹೇಳಿ ಸುಮಾರು 4.25 ಕೋಟಿ ಹಣವನ್ನು ವಂಚಿಸಿದ್ದಾರೆ.

ಶಂಕರ್ (ಹೆಸರು ಬದಲಾಯಿಸಲಾಗಿದೆ) ಸಲ್ಲಿಸಿದ ದೂರಿನ ಪ್ರಕಾರ, ಕುಟುಂಬಕ್ಕೆ ಪರಿಚಿತರಾಗಿರುವ ಹರಿ ಸುಬ್ರಮಣ್ಯಂ ಅವರು ತಮ್ಮೊಂದಿಗೆ ಷೇರು ಮಾರುಕಟ್ಟೆ ಹೂಡಿಕೆಗಳ ಬಗ್ಗೆ ಆಗಾಗ್ಗೆ ಚರ್ಚಿಸುತ್ತಿದ್ದರು. ಅವರು ದೂರುದಾರರನ್ನು ಗ್ಲೋಬ್ ಕ್ಯಾಪಿಟಲ್ ಇನ್ವೆಸ್ಟ್ಮೆಂಟ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ಹೂಡಿಕೆ ಮಾಡುವಂತೆ ಮನವೊಲಿಸಿದರು. ದೆಹಲಿ ಮೂಲದ ಬ್ರೋಕರೇಜ್ ಸಂಸ್ಥೆಗೆ ಸಂಬಂಧಿಸಿದ ಸಬ್-ಬ್ರೋಕರ್ ಎಂದು ಹೇಳಿಕೊಂಡ ರಾಂಪ್ರಸಾದ್ ಅಶ್ವಿನ್ ಎಂಬುವರನ್ನು ಪರಿಚಯಿಸಿದರು.

ಈ ಇಬ್ಬರು ವಾರ್ಷಿಕವಾಗಿ ಅಥವಾ ಮಾಸಿಕವಾಗಿ ಶೇ. 35?36 ರಷ್ಟು ಸ್ಥಿರ ಆದಾಯದ ಭರವಸೆ ನೀಡಿ ಶಂಕರ್ ಕುಟುಂಬಕ್ಕೆ ಹೂಡಿಕೆ ಮಾಡುವಂತೆ ಆಮಿಷವೊಡ್ಡಿದರು. ಶಂಕರ್ ಮೊದಲು ಗ್ಲೋಬ್ ಕ್ಯಾಪಿಟಲ್ ಮಾರ್ಕೆಟ್ ಲಿಮಿಟೆಡ್‌ನ ಖಾತೆಗೆ 1.25 ಕೋಟಿ ರೂ.ಗಳನ್ನು ವರ್ಗಾಯಿಸಿದರು, ನಂತರ ಅವರ ಕುಟುಂಬ ಸದಸ್ಯರು ಹೆಚ್ಚುವರಿಯಾಗಿ 3 ಕೋಟಿ ರೂ.ಗಳನ್ನು ಹೂಡಿಕೆ ಮಾಡಿದರು.

ದೈಹಿಕ-ಮಾನಸಿಕ ನ್ಯೂನತೆಗೆ ಉಚಿತ ಥೆರಪಿ

ಚಿಕ್ಕಮಗಳೂರು : ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಸೊಸೈಟಿ ಫಾರ್ ಪೀಪಲ್ಸ್ ಇಂಟಿಗ್ರೇಟೆಡ್ ಡೆವಲಪ್ಮೆಂಟ್ ವತಿಯಿಂದ ಅನುಷ್ಠಾನಗೊಂಡಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದಲ್ಲಿ ಫಿಜಿಯೋಥೆರಪಿಸ್ಟ್, ಕ್ಲಿನಿಕಲ್ ಸೈಕಾಲಜಿಸ್ಟ್, ಆಡಿಯೋಲಜಿ ಮತ್ತು ಸ್ಪೀಚ್ ಥೆರಪಿಸ್ಟ್ ಲಭ್ಯವಿದ್ದು, ದೈಹಿಕ ನ್ಯೂನತೆ, ಬುದ್ಧಿಮಾಂದ್ಯತೆ, ಕಲಿಕಾ ನ್ಯೂನತೆ, ಆಟಿಸಂ, ಮಾತು ಸಂವಹನ ಸಂಬಂಧಿಸಿದ ನ್ಯೂನತೆಯಿಂದ ಬಳಲ್ತಿರುವವರಿಗೆ ಉಚಿತ ಥೆರಪಿಯನ್ನು ನೀಡಲಾಗುತ್ತಿದೆ. ಅಗತ್ಯವಿರುವವರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಪ್ರಕಟಣೆಯೊಂದರಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗೆ ನಗರದ ತೊಗರಿಹಂಕಲ್ ಸರ್ಕಲ್ ಸಮೀಪ ಪ್ರಭು ಬೀದಿಯಲ್ಲಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ (9741898804)ವನ್ನು ಸಂಪರ್ಕಿಸಬಹುದು.

ತ್ವರಿತವಾಗಿ ಕುಡಿಯುವ ನೀರಿನ ಕಾಮಗಾರಿ ಪೂರ್ಣಗೊಳಿಸಿ

ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೂಚನೆ

ಚಿತ್ರದುರ್ಗ : ಜಲ ಜೀವನ್ ಮಿಷನ್ ಹಾಗೂ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಈಗಾಗಲೇ ಪೂರ್ಣಗೊಂಡ ಕಾಮಗಾರಿಗಳಲ್ಲಿ ಪ್ರಾಯೋಗಿಕವಾಗಿ ನೀರು ಹರಿಸಿ, ತೊಂದ-ರೆ ಕಂಡು ಬಂದರೆ ಅವುಗಳನ್ನು ಪರಿಹರಿಸಿ, ಗ್ರಾ.ಪಂ.ಗಳಿಗೆ ಹಸ್ತಾಂತರಿಸುವಂತೆ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿ.ಪಂ. ಸಭಾಂಗಣದಲ್ಲಿ ಸೋಮವಾರ ಜಲಜೀವನ್ ಮಿಷನ್ ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗಳ ಪ್ರಗತಿ ಪರಿಶೀಲನೆ ಸಭೆ ನಡೆಸಿ ಅವರು ಮಾತನಾಡಿದರು.

ಓವರ್ ಹೆಡ್ ಟ್ಯಾಂಕ್‌ಗಳ ನಿರ್ಮಾಣಕ್ಕೆ ಜಾಗದ ತೊಂದರೆ ಇರುವ ಗ್ರಾಮಗಳ ಪಟ್ಟಿಯನ್ನು ಸಿದ್ಧಪಡಿಸಿ, ಆಯಾ ತಾಲ್ಲೂಕಿನ ಶಾಸಕರೊಂದಿಗೆ ಚರ್ಚಿಸಬೇಕು. ಸ್ಥಳೀಯ ಜನಪ್ರತಿನಿಧಿಗಳ ಸಹಾಯದಿಂದ ಸಮಸ್ಯೆ ಪರಿಹರಿಸಿ ಕೂಡಲೇ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ಸಚಿವ

ಡಿ.ಸುಧಾಕರ್ ಹೇಳಿದರು.

ಕುಡಿಯುವ ನೀರಿನ ಕಾಮಗಾರಿಗಳ ಪೈಪ್ ಲೈನ್ ಅಳವಡಿಕೆಗೆ ಅರಣ್ಯ ಇಲಾಖೆ ಅಧಿಕಾರಿಗಳು ಸಹರಿಸಬೇಕು. ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕಾಮಗಾರಿಗಳಿಗೆ ಅನುಮತಿ ನೀಡಲು ಅರಣ್ಯ ಇಲಾಖೆ ನಿಯಮಗಳಲ್ಲಿ ಅವಕಾಶವಿದೆ. ಈ ಕುರಿತು ಜಿ.ಪಂ. ಸಿಇಓ ಅವರ ನೇತೃತ್ವದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ, ವಲಯ ಅರಣ್ಯ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇಂಜಿನಿಯರ್ ಹಾಗೂ ಗುತ್ತಿಗೆದಾರರ ಸಭೆ ನಡೆಸಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವಂತೆ ಸಚಿವ ಡಿ.ಸುಧಾಕರ್ ನಿರ್ದೇಶನ ನೀಡಿದರು.

ಕೆ.ಎಂ.ಇ.ಆರ್.ಸಿ ಹಾಗೂ ಡಿಎಂಎಫ್ ಯೋಜನೆಯಡಿ ಗ್ರಾಮೀಣ ಪ್ರದೇಶದ ಪ್ರಮುಖ ರಸ್ತೆಗಳನ್ನು ನಿರ್ಮಿಸಲು ಟೆಂಡರ್ ಕರೆಯಲಾಗಿದೆ. ಲೋಕೋಪಯೋಗಿ ಇಲಾಖೆ ಅಧಿಕಾರಿಗಳೊಂದಿಗೆ ಸಮನ್ವಯ ನಡೆಸಿ ರಸ್ತೆ ನಿರ್ಮಾಣಕ್ಕೂ ಮುನ್ನವೇ ಪೈಪ್‌ಲೈನ್‌ಗಳನ್ನು ಅಳವಡಿಸಬೇಕು. ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದರೂ, ಇನ್ನೂ ಕಾಮಗಾರಿ ಆರಂಭಿಸದ ಗುತ್ತಿಗೆದಾರರನ್ನು ಕೈಬಿಟ್ಟು, ಮರು ಟೆಂಡರ್ ಮಾಡಿ ಕಾಮಗಾರಿಗಳನ್ನು ತ್ವರಿತವಾಗಿ ಆರಂಭಿಸಬೇಕು ಎಂದು ಸಚಿವ ಡಿ.ಸುಧಾಕರ್ ಹೇಳಿದರು.

ಜಿಲ್ಲೆಯಲ್ಲಿ ರೂ.938 ಕೋಟಿ ವೆಚ್ಚದಲ್ಲಿ 1,560 ಕಾಮಗಾರಿಗಳಿಗೆ 4 ಬ್ಯಾಚ್‌ಗಳಲ್ಲಿ ಅನುಮೋದನೆ ನೀಡಲಾಗಿದೆ. ಈವರೆಗೂ 856 ಕಾಮಗಾರಿಗಳನ್ನು ಪೂರ್ಣ ಗೊಳಿಸಲಾಗಿದೆ. 660 ಕಾಮಗಾರಿಗಳು ಪ್ರಗತಿ ಹಂತದಲ್ಲಿವೆ. 44 ಕಾಮಗಾರಿಗಳನ್ನು ಪ್ರಾರಂಭಿಸಬೇಕಿದೆ. ಅಂದಾಜು ಶೇ.50 ರಷ್ಟು ಆರ್ಥಿಕ ಪ್ರಗತಿಯನ್ನು ಸಾಧಿಸಲಾಗಿದೆ. 511 ಕಾಮಗಾರಿಗಳನ್ನು ಗ್ರಾ.ಪಂ.ಗಳಿಗೆ ಹಸ್ತಾಂತರಿಸಲಾಗಿದೆ. ರೂ.2,997 ಕೋಟಿ ವೆಚ್ಚದಲ್ಲಿ ಒಟ್ಟು 10 ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಜಿ.ಪಂ. ಸಿಇಓ ಡಾ.ಆಕಾಶ್ ಮಾಹಿತಿ ನೀಡಿದರು.

ಐಮಂಗಲ ಹಾಗೂ ಜವಗೊಂಡನಹಳ್ಳಿ ಸೇರಿದಂತೆ 76 ಹಳ್ಳಿಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಲ್ಲಿ 37 ಹಳ್ಳಿಗಳ ಕಾಮಗಾರಿ ಪೂರ್ಣಗೊಂಡಿ-ದೆ. 34 ಅಂತಿಮ ಹಂತದಲ್ಲಿವೆ. ಓಬಳಾಪುರ ಗ್ರಾಮದಲ್ಲಿ ಈಗಿರುವ ವ್ಯವಸ್ಥೆಯಲ್ಲಿ ನೀರು ಸರಬರಾಜು ಮುಂದುವರಿಸುವಂತೆ ಗ್ರಾ.ಪಂ. ನಡಾವಳಿ ಮಾಡಿ ಜಿ.ಪಂ. ಗೆ ಕಳುಹಿಸಿಕೊಟ್ಟಿದ್ದಾರೆ. ಮರಡಿಹಳ್ಳಿ ಗ್ರಾಮದ ಕಾಮಗಾರಿಗೆ ಮರು ಟೆಂಡರ್ ಕರೆಯಲಾಗಿದೆ. ಯಲಕೂರನಹಳ್ಳಿ ಸೇರಿದಂತೆ ಹಲವು ಗ್ರಾಮಗಳಲ್ಲಿ ಓವರ್ ಹೆಡ್ ಟ್ಯಾಂಕ್ ನಿರ್ಮಾಣಕ್ಕೆ ಜಾಗದ ಅವಶ್ಯಕತೆಯಿದೆ. 17 ಗ್ರಾಮಗಳಲ್ಲಿ ಕಾಮಗಾರಿ ಪ್ರಾರಂಭಿಸಬೇಕಿದೆ ಎಂದು ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು.

ಜಿ.ಪಂ. ಉಪಕಾರ್ಯದರ್ಶಿ ಡಾ. ರಂಗಸ್ವಾಮಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸನಗೌಡ ಪಾಟೀಲ್, ಜಲಜೀವನ್ ಮಿಷನ್ ಯೋಜನೆಯ ಯೋಜನಾ ವ್ಯವಸ್ಥಾಪಕ ಮಂಜುನಾಥ ಎಸ್ ನಾಡರ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಿರಿಯ ಅಭಿಯಂತರು, ಗುತ್ತಿದಾರರು ಸಭೆಯಲ್ಲಿ ಉಪಸ್ಥಿರಿದ್ದರು.

ಪ್ಲಾಸ್ಟಿಕ್ ಮಾರಾಟ ಮಾಡುತ್ತಿದ್ದ ವರ್ತಕರಿಂದ 15 ಸಾವಿರ ರೂ ದಂಡ ವಸೂಲಿ

ಚಿಕ್ಕಮಗಳೂರು: ಪ್ಲಾಸ್ಟಿಕ್ ಮುಕ್ತ ನಗರವನ್ನಾಗಿಸಲು ನಗರಸಭೆ ಗುರಿ ಹೊಂದಿದ್ದು, ಅದರಂತೆ ಅಧಿಕಾರಿ ಸಿಬ್ಬಂದಿಗಳು ಉತ್ತಮ ಕೆಲಸ ಮಾಡುತ್ತಿದ್ದು, ನಗರದ ವಿವಿಧ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಮಾರಾಟ ಮಾಡುತ್ತಿದ್ದ ವರ್ತಕರಿಂದ ಸುಮಾರು 15 ಸಾವಿರ ರೂ. ದಂಡ ವಸೂಲಿ ಮಾಡಲಾಗಿದೆ ಎಂದು ನಗರಸಭಾಧ್ಯಕ್ಷೆ ಶೀಲಾದಿನೇಶ್ ತಿಳಿಸಿದರು.

ಅವರು ಇಂದು ನಗರದ ವಿವಿಧ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಮಾರಾಟ ಮಾಡುತ್ತಿದ್ದಾರೆ ಎಂದು ಸಾರ್ವಜನಿಕರಿಂದ ಬಂದ ದೂರಿನ ಹಿನ್ನೆಲೆಯಲ್ಲಿ ಕ್ಷಿಪ್ರ ಕಾರ್ಯಾಚರಣೆಯ ಮೂಲಕ ವರ್ತಕರಿಗೆ ಎಚ್ಚರಿಕೆ ನೀಡಿ ಮಾತನಾಡಿದರು.

ನಗರದ ವರ್ತಕರಿಗೆ ಇದು ಸರಿಯಾದ ಪಾಠವಾಗಿದ್ದು, ಮುಂದೆ ಯಾರೂ ಈ ತಪ್ಪು ಮಾಡಬಾರದು, ಪ್ಲಾಸ್ಟಿಕ್‌ನಿಂದ

ಸಾರ್ವಜನಿಕರಿಗೆತೊಂದರೆಯಾಗುತ್ತಿರ ಎವುದನ್ನು ಮನಗಂಡು ವರ್ತಕರ ವಿರುದ್ಧ ಸೂಕ್ತ ಕ್ರಮಕ್ಕೆ ಮುಂದಾಗಿರುವುದಾಗಿ ಹೇಳಿದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ನಗರದ ದೇವಿಸ್ಟೋರ್ ಸೇರಿದಂತೆ ಇನ್ನಿತರೆ ಅಂಗಡಿಗಳಲ್ಲಿ ನಗರಸಭೆ ನೀಡಿರುವ ಸೂಚನೆಗಳನ್ನು ಉಲ್ಲಂಘಿಸಿ ಪ್ಲಾಸ್ಟಿಕ್ ಮಾರಾಟ ಮಾಡುತ್ತಿರುವ ಹಿನ್ನೆಲೆಯಲ್ಲಿ 300 ಕೆ.ಜಿ ಪ್ಲಾಸ್ಟಿಕ್‌ನ್ನು ವಶಪಡಿಸಿಕೊಂಡು 15 ಸಾವಿರ ರೂ ದಂಡ ವಿಧಿಸಲಾಗಿದೆ ಎಂದರು.

ನಗರದ ವರ್ತಕರು ಮುಂದೆ ಇದೇ ರೀತಿಯ ತಪ್ಪು ಮಾಡಿದರೆ ನಗರಸಭೆಯಿಂದ ನೀಡಿರುವ ಉದ್ದಿಮೆ ಪರವಾನಗಿಯನ್ನು ರದ್ದುಪಡಿಸಿ, ಶಾಶ್ವತವಾಗಿ ಅಂಗಡಿಯನ್ನು ಮುಚ್ಚಿ ಕಾನೂನು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

ಕಲ್ಯಾಣ ಮಂಟಪ, ಬಾರ್ ಅಂಡ್ ರೆಸ್ಟೋರೆಂಟ್ ಹಾಗೂ ಹೋಟೆಲ್‌ಗಳಲ್ಲಿ ಪ್ಲಾಸ್ಟಿಕ್ ಬಳಕೆ ಮಾಡುತ್ತಿರುವ ಕುರಿತು ಬಂದ ದೂರಿನ ಹಿನ್ನೆಲೆಯಲ್ಲಿ ನಗರಸಭೆಯಲ್ಲಿ ಸಭೆ ನಡೆಸಿ ಸೂಕ್ತ ಎಚ್ಚರಿಕೆ ನೀಡಿದ್ದರೂ ಸೂಚನೆಗಳನ್ನು ಪಾಲನೆ ಮಾಡದೆ ಪ್ಲಾಸ್ಟಿಕ್ ಮಾರಾಟಕ್ಕೆ ಮುಂದಾಗಿರುವವರ ವಿರುದ್ಧ ಕ್ರಮ ಕೈಗೊಳ್ಳಲು ಮುಂದಾಗಿರುವುದಾಗಿ ಹೇಳಿದರು. ಹೊರ ಜಿಲ್ಲೆಗಳಿಂದ ಲಾರಿಗಳಲ್ಲಿ ಪ್ಲಾಸ್ಟಿಕ್ ನಗರಕ್ಕೆ ಬರುತ್ತಿದ್ದು, ತಪಾಸಣೆ ನಡೆಸಿ ಪ್ಲಾಸ್ಟಿಕ್‌ನ್ನು ವಶಪಡಿಸಿಕೊಳ್ಳಲು ಈಗಾಗಲೇ ಪೊಲೀಸ್ ಮತ್ತು ನಗರಸಭೆ ಸಿಬ್ಬಂದಿಗೆ ಸೂಚನೆ ನೀಡಲಾಗಿದೆ ಎಂದರು.

ನಗರಸಭೆ ಸದಸ್ಯ ಎ.ಸಿ. ಕುಮಾರಗೌಡ ಮಾತನಾಡಿ, ನಗರವನ್ನು ಕಸಮುಕ್ತ, ಪ್ಲಾಸ್ಟಿಕ್ ಮುಕ್ತವಾಗಿಸಬೇಕೆಂದು ನಗರಸಭೆಯಲ್ಲಿ ನಿರ್ಣಯ ಕೈಗೊಂಡಿ-ದ್ದು, ಈ ನಿಟ್ಟಿನಲ್ಲಿ ಹೋಟೆಲ್, ಬಾರ್ ಅಂಡ್ ರೆಸ್ಟೋರೆಂಟ್, ಕಲ್ಯಾಣ ಮಂಟಪಗಳಲ್ಲಿ ಪ್ಲಾಸ್ಟಿಕ್ ಬಳಕೆ ಮಾಡುತ್ತಿರುವ ಬಗ್ಗೆ ನಗರಸಭಾಧ್ಯಕ್ಷರು, ಪೌರಾಯುಕ್ತರು ಸಿಬ್ಬಂದಿ ಜೊತೆಗೆ ದಾಳಿ ನಡೆಸಿ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಗುತ್ತಿದೆ ಎಂದರು.

ಮಹಾವೀರ್ ಟ್ರೇಡಿಂಗ್ ಕಂಪನಿಗೆ 5 ಸಾವಿರ ರೂ, ವರ್ಧಮಾನ್ ದಿನಸಿ ಅಂಗಡಿಗೆ 2 ಸಾವಿರ ರೂ, ದೇವಿ ಪ್ಲಾಸ್ಟಿಕ್ ಅಂಗಡಿಗೆ 3 ಸಾವಿರ ರೂ, ಪುಷ್ಪ ಪೇಪರ್ ಮಾರ್ಟ್‌ಗೆ 5 ಸಾವಿರ ರೂ ದಂಡ ವಿಧಿಸಿ ಪ್ಲಾಸ್ಟಿಕ್‌ನ್ನು ವಶಪಡಿಸಿಕೊಂಡು ಎಚ್ಚರಿಕೆ ನೀಡಿದ್ದೇವೆ ಎಂದರು. ಈ ಸಂದರ್ಭದಲ್ಲಿ ಪರಿಸರ ಅಭಿಯಂತರರಾದ ತೇಜಸ್ವಿನಿ, ನಗರಸಭೆ ಸದಸ್ಯರುಗಳಾದ ಸೈಯದ್ ಜಾವಿದ್, ಅಮೃತೇಶ್ ಚನ್ನಕೇಶವ, ಆರೋಗ್ಯ